ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೫

**ಪಟ್ಟಿ – ೨೦**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

ಮುಂದುವರೆದ ಉಪವೇಶನ

**ಸೋಮವಾರ, ದಿನಾಂಕ : ೩೦ನೇ ಮಾರ್ಚ್, ೨೦೧೫**

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

F-1 B/B

## ಪ.ಜಾ/ಪ.ಪಂ. ಜನಾಂಗದಲ್ಲಿನ ಅಲೆಮಾರಿ ಮತ್ತು ಅರೆ ಅಲೆಮಾರಿಯವರ ಅಭಿವೃದ್ಧಿ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೪೭ (೭೯೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದಲ್ಲಿನ ಅಲೆಮಾರಿ ಮತ್ತು ಅರೆ ಅಲೆಮಾರಿಗಳ ಅಭಿವೃದ್ಧಿಗಾಗಿ ೨೦೧೪–೧೫ರಲ್ಲಿ ನಿಗದಿಪಡಿಸಿದ್ದ ಮೂವತ್ತು ಕೋಟಿ ರೂ.ಗಳ ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ನೀಡಲಾಗಿದೆ ;

(ಆ) ಎಲ್ಲೆಲ್ಲಿ ಎಷ್ಟೆಷ್ಟು ಸಂಖ್ಯೆಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಗಳನ್ನು ಗುರುತಿಸಿ ಅಭಿವೃದ್ಧಿಪಡಿಸಿದ್ದೀರಿ ;

(ಇ) ಈ ನಿಟ್ಟಿನಲ್ಲಿ ಖರ್ಚಾದ ಒಟ್ಟು ಹಣ ಎಷ್ಟು; ಖರ್ಚಾಗದೇ ಉಳಿದಿರುವ ಹಣ ಎಷ್ಟು; ಈ ಹಣವನ್ನು ಯಾವ ರೀತಿ ಬಳಸಿಕೊಳ್ಳಲಾಗುವುದು ?

# SCP-TSP ಅಡಿಯಲ್ಲಿ ಪ್ರತಿಭಾವಂತ ಎಸ್.ಸಿ./ಎಸ್.ಟಿ. ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೪೮ (೨೯೫೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎಸ್.ಸಿ.ಪಿ-ಟಿ.ಎಸ್.ಪಿ. ಅಡಿಯಲ್ಲಿ ಇಂಜಿನಿಯರಿಂಗ್-ಮೆಡಿಕಲ್ ಪಿ.ಹೆಚ್.ಡಿ. ಮತ್ತು ಪತ್ರಿಕೋದ್ಯಮ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾ/ಪ.ಪಂ ವಿದ್ಯಾರ್ಥಿಗಳಿಗೆ ೨೦೧೪-೧೫ರ ಬಜೆಟ್ ಘೋಷಣೆಯಂತೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ನೀಡಲಾಗಿದೆಯೇ ;

(ಆ) ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಎಷ್ಟೆಷ್ಟು ಲ್ಯಾಪ್‌ಟಾಪ್‌ಗಳನ್ನು ಒದಗಿಸಲಾಗಿದೆ ;

(ಇ) ಇದಕ್ಕಾಗಿ ಮೀಸಲಿಟ್ಟ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು ;

(ಈ) ಖರ್ಚಾಗದೇ ಉಳಿದಿರುವ ಹಣವನ್ನು ಯಾವ ರೀತಿಯಲ್ಲಿ ಬಳಸಿಕೊಳ್ಳಲಾಗುವುದು ?

## ಲಂಬಾಣಿ ಮತ್ತು ಬೋವಿ ನಿಗಮಗಳಿಗೆ ನೀಡಿರುವ ಅನುದಾನ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೪೯ (೩೦೦೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯುಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಅಂಬೇಡ್ಕರ್ ಅಭಿವೃದ್ಧಿ ನಿಗಮ ಹೊರತುಪಡಿಸಿ ಲಂಬಾಣಿ ನಿಗಮಕ್ಕೆ ಮತ್ತು ಬೋವಿ ನಿಗಮಕ್ಕೆ ಎಷ್ಟು ಅನುದಾನ ನಿಗಧಿಪಡಿಸಲಾಗಿದೆ ;

(ಆ) ಈ ಎರಡು ನಿಗಮಗಳಲ್ಲಿ ಎಷ್ಟೆಷ್ಟು ಹಣ ವಿನಿಯೋಗಿಸಲಾಗಿದೆ ;

(ಇ) ಈ ಎರಡೂ ಸಮುದಾಯಗಳು ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದಲೂ ಸಾಲ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆಯೇ ; ಹಾಗಿದ್ದಲ್ಲಿ, ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಈ ಎರಡು ಸಮುದಾಯದ ಫಲಾನುಭವಿಗಳಿಗೆ ಮಂಜೂರು ಮಾಡಿರುವ ಸಾಲದ ಮೊತ್ತವೆಷ್ಟು ?

## ಅಂಬೇಡ್ಕರ್ ಭವನ, ಬಾಬು ಜಗಜೀವನರಾಂ ಭವನ, ವಾಲ್ಮೀಕಿ ಭವನದ ನಿರ್ಮಾಣಕ್ಕೆ ಮೀಸಲಿಟ್ಟ ಹಣ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೫೦ (೩೦೦೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯುಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ಬಿ.ಆರ್. ಅಂಬೇಡ್ಕರ್ ಭವನ, ಬಾಬು ಜಗಜೀವನ್ ರಾಂ ಭವನ, ವಾಲ್ಮೀಕಿ ಭವನ, ನಿರ್ಮಾಣಕ್ಕಾಗಿ ಮೀಸಲಿಟ್ಟ ೨೦೧೪–೧೫ನೇ ಸಾಲಿನಲ್ಲಿ ಒಟ್ಟು ಹಣ ಎಷ್ಟು ;

(ಆ) ಯಾವ ಯಾವ ಜಿಲ್ಲೆಗಳಲ್ಲಿ ಯಾವ ಯಾವ ಸ್ಥಳಗಳಲ್ಲಿ ಈ ಭವನವನ್ನು ನಿರ್ಮಿಸಲು ಹಣ ನೀಡಲಾಗಿದೆ ಮತ್ತು ಎಷ್ಟು ಹಣ ನೀಡಲಾಗಿದೆ ?

## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ನೌಕರರ ಸಂಖ್ಯೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೫೧ (೧೪೨೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಒಟ್ಟು ಅಧಿಕಾರಿಗಳ ಮತ್ತು ನೌಕರರ ಸಂಖ್ಯೆ ಎಷ್ಟು; ಇವರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ದರ್ಜೆವಾರು ಸಂಖ್ಯೆ ಎಷ್ಟು ;

(ಆ) ಇದುವರೆಗೆ ಈ ಸಂಸ್ಥೆಯಲ್ಲಿ ವಜಾ ಮಾಡಲಾದ ನೌಕರರ ಸಂಖ್ಯೆ ಎಷ್ಟು; (ದರ್ಜೆವಾರು) ಅಮಾನತ್ತುಗೊಂಡವರ ಸಂಖ್ಯೆ ಎಷ್ಟು; ವಜಾ ಮಾಡಲಾಗಿದ್ದ ನೌಕರರನ್ನು ನ್ಯಾಯಾಲಯದ ಆದೇಶದ ಮೇರೆಗೆ ಮರುನೇಮಕ ಮಾಡಿಕೊಂಡವರ ಸಂಖ್ಯೆ ಎಷ್ಟು; ಇವರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರ ಸಂಖ್ಯೆ ಎಷ್ಟು ?

## ಹೆಚ್‌ಐವಿ ಖಾಯಿಲೆಯಿಂದ ಮೃತರಾದ ಶ್ರೀ ಗಣೇಶ್ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೫೫೨ (೨೯೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜೀವ ಗಾಂಧಿ ಎದೆ ರೋಗ ಆಸ್ಪತ್ರೆಯಲ್ಲಿ ಹೆಚ್‌ಐ ಎನ್‌ಐ ನಿಮಿತ್ತ ದಾಖಲಾಗಿದ್ದ ಶ್ರೀ ಗಣೇಶ್ ಎಂಬುವವರು ಮೃತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ನಿರಂತರ ವಿದ್ಯುತ್ ಇಲ್ಲದೇ ಇರುವುದರಿಂದ ಆ ವ್ಯಕ್ತಿ ಮೃತಪಟ್ಟಿರುವುದಾಗಿ ಆತನ ಪೋಷಕರು ಮತ್ತು ಸಂಬಂಧಿಕರು ಆರೋಪಿಸಿದ್ದಾರೆ, ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇಂತಹ ಘಟನೆ ಮರುಕಳಿಸದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಳಪೆ ಗುಣಮಟ್ಟದ ಆಹಾರ ಧಾನ್ಯಗಳ ಪೂರೈಕೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೫೫೩ (೨೯೬೮) ಮಾನ್ಯ ಆಹಾರ ಮತ್ತು ನಾಗರೀಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಹಾರ ಇಲಾಖೆಯಿಂದ ಶಿಕ್ಷಣ ಇಲಾಖೆಯ ಅಕ್ಷರ ದಾಸೋಹ ಕಾರ್ಯಕ್ರಮಕ್ಕೆ ಪೂರೈಸುತ್ತಿರುವ ಆಹಾರ ಧಾನ್ಯಗಳು ಕಳಪೆಯಿಂದ

ಕೂಡಿರುವುದು, ತೂಕದಲ್ಲಿ ಭಾರಿ ಪ್ರಮಾಣದಲ್ಲಿ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಇಂತಹ ಎಷ್ಟು ಪ್ರಕರಣಗಳು ಸರ್ಕಾರದ ಗಮನದಲ್ಲಿ ಇದೆ ;

(ಇ) ಇಂತಹ ಪ್ರಕರಣಗಳಿಂದ ಸರ್ಕಾರಕ್ಕೆ ಆಗಿರುವ ನಷ್ಟ ಎಷ್ಟು ;

(ಈ) ಈ ಅವ್ಯವಹಾರದಲ್ಲಿ ಆಹಾರ ಇಲಾಖೆ ಅಧಿಕಾರಿಗಳು ಭಾಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಅಂತಹವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಾಸ್ಟಲ್ ನಿರ್ವಹಣಾ ಪ್ರಾಧಿಕಾರ ರಚನೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೫೫೪ (೧೫೨೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ವಿದ್ಯಾರ್ಥಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಕಳೆದ ಮೂರು ವರ್ಷಗಳ ಶೈಕ್ಷಣಿಕ ಪ್ರಗತಿ ಏನು ಈ ವಿದ್ಯಾರ್ಥಿನಿಲಯಗಳಲ್ಲಿ

೧ನೇ ತರಗತಿಯಿಂದ ಪದವಿವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಪ್ರಗತಿಯ ವಿವರ ನೀಡುವುದು)

(ಇ) ಈ ವಿದ್ಯಾರ್ಥಿ ನಿಲಯಗಳನ್ನು ಸಮರ್ಥವಾಗಿ ನಿರ್ವಹಿಸಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ವಿದ್ಯಾರ್ಥಿ ನಿಲಯಗಳನ್ನು ಗುಣಾತ್ಮಕ/ಸ್ವಾಭಿಮಾನಿ ಶಿಕ್ಷಣ ನೀಡುವುದಕ್ಕಾಗಿ ಎಲ್ಲಾ ವಿದ್ಯಾರ್ಥಿ ನಿಲಯಗಳನ್ನು ಒಳಗೊಂಡ "ಹಾಸ್ಟಲ್ ನಿರ್ವಹಣಾ ಪ್ರಾಧಿಕಾರ" ರಚಿಸಲು ಸರ್ಕಾರ ಚಿಂತಿಸಿದೆಯೇ ?

**ಡಯಾಲಿಸಿಸ್ ಯಂತ್ರಗಳ ಕುರಿತು**

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೨೫೫೫ (೨೯೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿನ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಯಂತ್ರಗಳು ಖರೀದಿಸಿ ಬಳಕೆ ಮಾಡದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಂತಹ ಎಷ್ಟು ಡಯಾಲಿಸಿಸ್ ಯಂತ್ರಗಳು ಹದಗೆಟ್ಟಿರುತ್ತವೆ ;

(ಇ) ಇದಕ್ಕೆ ಕಾರಣಗಳೇನು ;

(ಈ) ಇಂತಹ ಅಗತ್ಯಕ್ಕೆ ಹೆಚ್ಚಾಗಿ ಹಾಗೂ ಅನುಪಯುಕ್ತ ಡಯಾಲಿಸಿಸ್ ಯಂತ್ರಗಳನ್ನು ಖರೀದಿಸಿ ಹದಗೆಡಲು ಕಾರಣರಾದವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗುತ್ತಿಗೆ ಆಧಾರದ ಮೇಲೆ ನೇಮಕವಾಗಿರುವ ಶಿಕ್ಷಕರ ಸಕ್ರಮ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೫೫೬ (೨೮೯೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಮುರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ರೋಸ್ಟರ್ ಹಾಗೂ ಮೆರಿಟ್ ಆಧಾರದಲ್ಲಿ ಕೋರ್ಟಿನ ಆದೇಶದನ್ವಯ ಶಿಕ್ಷಕರಾಗಿ ಸೇವೆ ಮುಂದುವರೆಯುತ್ತಿರುವ ಶಿಕ್ಷಕರ ಸೇವಾ ಸಕ್ರಮಾತಿ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ವಿಳಂಬವಾಗಲು ಕಾರಣವೇನು ;

(ಇ) ಈ ಪ್ರಕ್ರಿಯೆಯನ್ನು ಎಷ್ಟು ದಿನಗಳಲ್ಲಿ ಪೂರ್ಣಗೊಳಿಸಲಾಗುವುದು ?

## ಮೊಬೈಕ್ ಅಂಬ್ಯುಲೆನ್ಸ್ ಆರಂಭ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೫೫೭ (೨೮೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಪಘಾತ ಸಂಭವಿಸಿದ ಸಂದರ್ಭಗಳಲ್ಲಿ ಸಂಚಾರ ದಟ್ಟಣೆಯಿಂದಾಗಿ ಅಂಬ್ಯುಲೆನ್ಸ್ ನಿಗಧಿತ ಸ್ಥಳಕ್ಕೆ ತೆರಳಲು ವಿಳಂಬವಾಗಿ ಪ್ರಾಣಹಾನಿಯಾಗುವುದನ್ನು ತಡೆಯಲು ಮೊಬೈಕ್ ಅಂಬ್ಯುಲೆನ್ಸ್ ಅನ್ನು ಆರಂಭ ಮಾಡುವ ಯೋಜನೆ ಸರ್ಕಾರದ ಮುಂದಿದೆಯೆ ;

(ಆ) ಇದ್ದಲ್ಲಿ, ಇದನ್ನು ಯಾವಾಗ ಜಾರಿಗೆ ತರಲಾಗುವುದು ;

(ಇ) ಇದಕ್ಕಾಗಿ ಮೀಸಲಾಗಿಟ್ಟಿರುವ ಅಂದಾಜು ಹಣವೆಷ್ಟು ?

## ರಾಜ್ಯದಲ್ಲಿ ನಿಷೇದಿತ ಔಷಧಿಗಳ ಮಾರಾಟ ನಿಯಂತ್ರಣ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೫೫೮ (೨೮೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ನಿಷೇಧಿತ ಔಷಧಿಗಳು ಯಾವುವು ;

(ಆ) ನಿಷೇಧಿತವಾಗಿರುವ ಔಷಧಿಗಳು ಮಾರುಕಟ್ಟೆಯಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅವುಗಳನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ನಿಷೇಧಿತ ಔಷಧಿಗಳನ್ನು ಯಾವ ಯಾವ ಕಂಪನಿಗಳು ತಯಾರಿಸುತ್ತಿವೆ ಹಾಗೂ ಈ ರೀತಿ ತಯಾರಿಸುವ ಕಂಪನಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುಷ್ಠಾನ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೫೫೫ (೨೮೯೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮಾಹಿತಿ ನಿರ್ವಹಣಾ ವ್ಯವಸ್ಥೆ ಜಾಲತಾಣದಲ್ಲಿದೆಯೇ ;

(ಆ) ಈ ಮಾಹಿತಿ ನಿರ್ವಹಣಾ ವ್ಯವಸ್ಥೆಯಡಿ ಜಿಲ್ಲಾಧಿಕಾರಿಗಳು, ಶಾಸಕರು ಪ್ರತಿದಿನ ಕಾಮಗಾರಿಗಳ ಪ್ರಗತಿಯನ್ನು ಮಾಹಿತಿ ನಿರ್ವಹಣಾ ವ್ಯವಸ್ಥೆಯಲ್ಲಿ ನಿಯತಕಾಲಿಕವಾಗಿ ಅಳವಡಿಸಿದ್ದಾರೆಯೇ ;

(ಇ) ಈ ಯೋಜನೆ ಜಾರಿಗೆ ಬಂದ ನಂತರ ಎಷ್ಟು ಜಿಲ್ಲೆಗಳಲ್ಲಿ ಪೂರ್ಣವಾದ ಮಾಹಿತಿಯನ್ನು ಅಳವಡಿಸಿರುವರು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಮಾಹಿತಿ ಅಳವಡಿಸದಿದ್ದಲ್ಲಿ, ಜಿಲ್ಲಾಡಳಿತದ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

# ಇಲಾಖೆಯಿಂದ ಪೌಷ್ಠಿಕ ಸಾಮಾಗ್ರಿಗಳ ಸರಬರಾಜು ಮತ್ತು ಆರೋಗ್ಯವಾಣಿ ಕಾರ್ಯಕ್ರಮ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೫೬೦ (೨೮೯೩) ಮಾನ್ಯ ಆಹಾರ ಮತ್ತು ನಾಗರೀಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಹಾರ ಇಲಾಖೆಯ ಯೋಜನೆಗಳ ಮೌಲ್ಯಮಾಪನ ಮಾಡಲು ಸರ್ಕಾರವು ೨೦೧೩ ರಲ್ಲಿ ಮೈಸೂರಿನ ಗ್ರಾಸ್‌ರೂಟ್ ರಿಸರ್ಚ್ ಆ್ಯಂಡ್ ಅಡ್ವೊಕಸಿ ಮೂಮ್ಮೆಂಟ್ ಸಂಸ್ಥೆಗೆ (ಗ್ರಾಮ್) ವರದಿ ತಯಾರಿಸಲು ತಿಳಿಸಿರುವುದು ನಿಜವೇ ;

(ಆ) ಇದ್ದಲ್ಲಿ, ಈ ಗ್ರಾಮ್ ಸಂಸ್ಥೆ ನೀಡಿರುವ ವರದಿಯ ಮಾಹಿತಿಯನ್ನು ಒದಗಿಸುವುದು ;

(ಇ) ಈ ಸಂಸ್ಥೆಯ ಅಪೌಷ್ಠಿಕತೆ ನಿವಾರಣೆ ಅಕ್ಕಿ ಜೊತೆಗೆ ಇತರೆ ಪೌಷ್ಠಿಕ ಧಾನ್ಯಗಳನ್ನು ಸರಬರಾಜು ಮಾಡಬೇಕೆಂಬುದರ ಬಗ್ಗೆ ಸರ್ಕಾರದ ಅಭಿಪ್ರಾಯ ಏನು ;

(ಈ) ಪಡಿತರ ಗ್ರಾಹಕರ ಸಮಸ್ಯೆ ನಿವಾರಣೆ ಮಾಡಲು ಇಲಾಖೆ ಆರಂಭಿಸಿದ ಆರೋಗ್ಯವಾಣಿ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲದಿರುವ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಉ) ಗ್ರಾಮ್ ಸಂಸ್ಥೆಯ ಅಧ್ಯಯನ ತಂಡ ಸದಸ್ಯರು ರೋಣ ಮತ್ತು ಗಂಗಾವತಿ ಸ್ಥಳಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ರಾಜಾರೋಷವಾಗಿ ಅನ್ನಧಾನ್ಯ ಯೋಜನೆಯಲ್ಲಿ ಖರೀದಿಸಿರುವ ಅಕ್ಕಿಯನ್ನು ಪ್ರತಿ ಕೆ.ಜಿಗೆ ೧೦ ರೂಪಾಯಿಯಂತೆ ಖಾಸಗಿಯವರಿಗೆ ಮಾರಾಟ ಮಾಡುತ್ತಿದ್ದರು ಎಂದು ತಿಳಿಸಿರುವ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಜೀವ್ ಆರೋಗ್ಯ ಭಾಗ್ಯ ಮತ್ತು ವಾಜಪೇಯಿ ಆರೋಗ್ಯ ಶ್ರೀ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೬೧ (೨೯೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಾಜಪೇಯಿ ಆರೋಗ್ಯಶ್ರೀ ಯೋಜನೆಯ ಸೌಲಭ್ಯ ರಾಜ್ಯದ ಯಾವ ಯಾವ ಆಸ್ಪತ್ರೆಗಳಲ್ಲಿ ಲಭ್ಯವಿದೆ ; (ಜಿಲ್ಲಾವಾರು ಆಸ್ಪತ್ರೆ ಹೆಸರು, ದೂರವಾಣಿ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

(ಆ) ವಾಜಪೇಯಿ ಆರೋಗ್ಯಶ್ರೀ ಯೋಜನೆ ಯಾವ ಯಾವ ಕಾಯಿಲೆಗಳಿಗೆ ಅನ್ವಯಿಸುತ್ತದೆ ;

(ಇ) **'ರಾಜೀವ್ ಆರೋಗ್ಯ ಭಾಗ್ಯ'** ಯೋಜನೆಯು ಯಾವ ಯಾವ ಕಾಯಿಲೆಗಳಿಗೆ ಅನ್ವಯಿಸಲಿದೆ; ಹಾಗೂ ೪೪೯ ಬಗೆಯ ಶಸ್ತ್ರಚಿಕಿತ್ಸೆ ಯಾವುದು ;

(ಈ) ರಾಜ್ಯ ಯಾವ ಯಾವ ಆಸ್ಪತ್ರೆಗಳಲ್ಲಿ **'ರಾಜೀವ್ ಆರೋಗ್ಯ ಭಾಗ್ಯ'** ಯೋಜನೆ ಲಭ್ಯವಿದೆ ; (ಜಿಲ್ಲಾವಾರು ಆಸ್ಪತ್ರೆ ಹೆಸರು, ದೂರವಾಣಿ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

(ಉ) 'ರಾಜೀವ್ ಆರೋಗ್ಯ ಭಾಗ್ಯ' ಯೋಜನೆಯು ಕೆಲವೇ ಜಿಲ್ಲೆಗಳಲ್ಲಿ ಹಾಗೂ ವಾಜಪೇಯಿ ಆರೋಗ್ಯಶ್ರೀ ಯೋಜನೆಯು ಕೆಲವೇ ಆಸ್ಪತ್ರೆಗಳಲ್ಲಿ ಲಭ್ಯವಿರುವುದರಿಂದ ಅನೇಕ ಬಡ ರೋಗಿಗಳು ಯೋಜನೆಯ ಸೌಲಭ್ಯದಿಂದ ವಂಚಿತರಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹೌದಾದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ ?

## ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಿಗೆ ಕಡಿಮೆ ಹಣ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೬೨ (೨೯೦೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಇಲಾಖೆಯಿಂದ ಮೆಟ್ರಿಕ್ ಪೂರ್ವದ ವಸತಿನಿಲಯದ ಪ್ರತೀ ವಿದ್ಯಾರ್ಥಿಗಳಿಗೆ ನೀಡುವ ಹಣ ಎಷ್ಟು; ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ನೀಡುವ ಹಣ ಎಷ್ಟು ;

(ಆ) ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಇಲಾಖೆಯಿಂದ ಮೆಟ್ರಿಕ್ ಪೂರ್ವದ ವಸತಿ ನಿಲಯದಲ್ಲಿ ಪ್ರವೇಶ ದೊರೆಯದ ಪ್ರತೀ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನದ ಹಣ ಎಷ್ಟು; ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನದ ಹಣ ಎಷ್ಟು ;

(ಇ) ಅದೇ ರೀತಿ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಇಲಾಖೆ ಹಾಗೂ ಅಲ್ಪ ಸಂಖ್ಯಾತ ಇಲಾಖೆಯ ಶಾಲೆಯಲ್ಲಿ ನೀಡುವ ವಿದ್ಯಾರ್ಥಿ ವೇತನಗಳಲ್ಲಿ ವ್ಯತ್ಯಾಸವಿರುವುದು ನಿಜವೆ ;

(ಈ) ಅಲ್ಪಸಂಖ್ಯಾತರು ಹಾಗೂ ಆರ್ಥಿಕ ದುರ್ಬಲರಾದ ಹಿಂದುಳಿದ ವರ್ಗದ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ನೀಡುವ ಅನುದಾನದಲ್ಲಿ ತಾರತಮ್ಯ ನೀತಿ ಅನುಸರಿಸುತ್ತಿರುವುದು ಸರಿಯೆ ;

(ಉ) ದುರ್ಬಲವರ್ಗದ ಎಲ್ಲಾ ವಿದ್ಯಾರ್ಥಿಗಳನ್ನು ಸಮಾನವಾಗಿ ಪರಿಗಣಿಸಿ, ಸಮಾನ ವಿದ್ಯಾರ್ಥಿ ವೇತನ ವಿತರಿಸುವ ಸಲುವಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; ಯಾವಾಗ ಈ ಬಗ್ಗೆ ಕ್ರಮಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ವಸತಿ ನಿಲಯಗಳ ಮೂಲಭೂತ ಸೌಕರ್ಯ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೬೩ (೨೮೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯುಗಳನ್ನು ದಯುವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಒಟ್ಟು ಎಷ್ಟು ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಸರ್ಕಾರದ ಸ್ವಂತ ಮತ್ತು ಬಾಡಿಗೆ ಆಧಾರದ ಕಟ್ಟಡಗಳಲ್ಲಿ ಇರುವ ವಸತಿ ನಿಲಯಗಳು ಎಷ್ಟು ;

(ಇ) ಸಮಾಜ ಕಲ್ಯಾಣ ಇಲಾಖೆ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯ ಕೊರತೆಯಿಂದಾಗಿ ಸಮಸ್ಯೆಗಳ ಆಗರ ಆಗಿರುವುದು ನಿಜವೆ ;

(ಈ) ಇಲಾಖೆಯ ವಸತಿ ನಿಲಯಗಳಲ್ಲಿ ಹೆಣ್ಣುಮಕ್ಕಳ ಮೇಲೆ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸಮಾಜ ಕಲ್ಯಾಣ ಇಲಾಖೆ ವಸತಿನಿಲಯಗಳಲ್ಲಿನ ಮೂಲಭೂತ ಸೌಕರ್ಯಗಳನ್ನು ಒದಗಿಸುವುದೂ ಸೇರಿದಂತೆ, ಹೆಣ್ಣುಮಕ್ಕಳ ಮೇಲೆ ಆಗುತ್ತಿರುವ ದೌರ್ಜನ್ಯ ಪ್ರಕರಣಗಳನ್ನು ಸಂಪೂರ್ಣವಾಗಿ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕಾಲೇಜು ವಿದ್ಯಾರ್ಥಿಗಳಿಗೆ ಮಾಸಿಕ ಹಣ ಹೆಚ್ಚಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೬೪ (೨೮೯೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯುವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾಲಾಜು ವಿದ್ಯಾರ್ಥಿ ನಿಲಯಗಳಲ್ಲಿ ಪ್ರತಿ ವಿದ್ಯಾರ್ಥಿಗೆ ಮಾಸಿಕ ನೀಡಲಾಗುತ್ತಿರುವ ಹಣವೆಷ್ಟು ,

(ಆ) ಕಾಲೇಜು ವಿದ್ಯಾರ್ಥಿ ನಿಲಯಗಳಲ್ಲಿ ಕಡಿಮೆ ಹಣ ನೀಡುತ್ತಿರುವುದರಿಂದ ಉತ್ತಮ ಆಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾಲೇಜು ವಿದ್ಯಾರ್ಥಿಗಳಿಗೆ ಹೆಚ್ಚು ಮಾಸಿಕ ಹಣ ನೀಡಲು ಸರ್ಕಾರ ಕೈಗೊಂಡ ಕ್ರಮವೇನು ; (ಪೂರ್ಣ ವಿವರ ನೀಡುವುದು)

(ಈ) ಒಟ್ಟಾರೆ ಕಾಲೇಜು ವಿದ್ಯಾರ್ಥಿ ನಿಲಯಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರದ ನಿಲುವೇನು ? (ಪೂರ್ಣ ವಿವರ ನೀಡುವುದು)

## ಅಸಮರ್ಪಕ ಗ್ಯಾಸ್ ಸಿಲಿಂಡರ್ ಸರಬರಾಜು

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :-**

೨೫೬೫ (೨೯೦೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆಯ ಸರ್ಕಾರಿ ಶಾಲೆಗಳ ಮತ್ತು ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ಊಟ ತಯಾರಿಸಲು ಅಗತ್ಯವಿರುವ ಗ್ಯಾಸ್ ಸಿಲಿಂಡರ್ ಸರಬರಾಜು ಸಮರ್ಪಕ ರೀತಿಯಲ್ಲಿ ಆಗುತ್ತಿಲ್ಲವೆನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇವರುಗಳಿಗೆ ಗ್ಯಾಸ್ ಸಿಲಿಂಡರ್ ಸರಬರಾಜು ಮಾಡಲು ಹೆಚ್ಚುವರಿ ಹಣ ಕೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

F-2 R/3

## ವಿದ್ಯಾರ್ಥಿ ವೇತನ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :-**

೨೫೬೬ (೨೯೦೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ೨೦೧೩-೧೪ನೇ ಸಾಲಿನಲ್ಲಿ ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಬೆಂಗಳೂರು ನಗರ ಜಿಲ್ಲೆಯ ವಿದ್ಯಾರ್ಥಿಗಳ ಸಂಖ್ಯೆಯೆಷ್ಟು ; (ವಿವರ ನೀಡುವುದು)

(ಆ) ಇವರಲ್ಲಿ ಎಷ್ಟು ವಿದ್ಯಾರ್ಥಿಗಳ ವೈಯಕ್ತಿಯ ಖಾತೆಗಳಿಗೆ ಹಣ ಜಮೆಯಾಗಿದೆ ?

## ರೋಣ ಹೈಟೆಕ್ ಬಸ್ ನಿಲ್ದಾಣ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :-**

೨೫೬೭ (೨೯೦೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಾಯುವ್ಯ ಸಾರಿಗೆ ಸಂಸ್ಥೆಗೆ ಸೇರುವ ರೋಣದಲ್ಲಿನ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣವಾಗಿದ್ದು, ಯಾವಾಗ; ಇಲ್ಲಿನ ಮಳಿಗೆಗಳಿಂದ ಪ್ರತಿ ತಿಂಗಳು ಬರುವ ಆದಾಯವೆಷ್ಟು ;

(ಆ) ಸದರಿ ನಿಲ್ದಾಣದಿಂದ ಬರುವ ಆದಾಯವನ್ನು ಯಾವ ಯಾವ ಕಾರಣಗಳಿಗೆ ವಿನಿಯೋಗಿಸಲಾಗುತ್ತದೆ ; (ವಿವರ ನೀಡಿ)

(ಇ) ಸದರಿ ನಿಲ್ದಾಣದಲ್ಲಿ ಕುಡಿಯುವ ನೀರು, ಶೌಚಾಲಯ ನಿರ್ವಹಣೆ ಇತರೆ ಕಾರ್ಯಗಳಿಗೆ ಅಂದಾಜು ತಿಂಗಳಿಗೆ ಎಷ್ಟು ಹಣ ವ್ಯಯಿಸಲಾಗುತ್ತಿದೆ ;

(ಈ) ಈ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಕುಡಿಯುವ ನೀರಿನ ಸಮರ್ಪಕ ಪೂರೈಕೆ ಇಲ್ಲದಿರುವುದು, ಶೌಚಾಲಯಗಳು ಗಬ್ಬು ವಾಸನೆಯಿಂದ ಕೂಡಿರುವ ಕುರಿತು ಮಾಧ್ಯಮಗಳಲ್ಲಿ ಪ್ರಕಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಸದರಿ ನಿಲ್ದಾಣದ ಅಸಮರ್ಪಕ ನಿರ್ವಹಣೆ ಕುರಿತು ಯಾವುದಾದರೂ ದೂರುಗಳು ಬಂದಿವೆಯೆ ; (ವಿವರ ನೀಡಿ)

(ಉ) ಈ ಸಂಬಂಧ ಸ್ಥಳ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳಲಾಗಿದೆಯೆ ? (ವಿವರ ನೀಡಿ)

## ಜೋಳಕ್ಕೆ ರಾಸಾಯನಿಕ ಪದಾರ್ಥ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :–**

೨೫೬೮ (೨೯೦೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯಲ್ಲಿ ಹೈಬ್ರಿಡ್ ಜೋಳ, ೫ ನಂಬರ್ ಜೋಳ, ಕಪ್ಪು ಜೋಳ ಎಂದು ಕರೆಯುಲಾಗುವ ಕಡಿಮೆ ಗುಣಮಟ್ಟದ ಜೋಳಕ್ಕೆ ರಸಾಯನಿಕ ಪದಾರ್ಥ ಉಪಯೋಗಿಸಿ ಪಾಲಿಷ್ ಮಾಡಿ ಬಿಳಿಜೋಳವನ್ನಾಗಿ ಮಾರುಕಟ್ಟೆಗೆ ಬಿಡುಗಡೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಗಮನಕ್ಕೆ ಬಂದಿದ್ದಲ್ಲಿ, ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; ಎಷ್ಟು ಪ್ರಮಾಣದ ಜೋಳವನ್ನು ವಶಪಡಿಸಿಕೊಳ್ಳಲಾಗಿದೆ ;

(ಇ) ಈ ರೀತಿಯ ಜೋಳವು ಬೆಳಗಾವಿಯನ್ನು ಹೊರತು ಪಡಿಸಿ ಬೇರೆ ಯಾವುದಾದರೂ ಜಿಲ್ಲೆಯಲ್ಲಿ ವಶಪಡಿಸಿಕೊಳ್ಳಲಾಗಿದೆಯೆ ? (ಇದ್ದಲ್ಲಿ, ವಿವರ ನೀಡಿ)

## ಅನ್ನಭಾಗ್ಯ ಯೋಜನೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :-**

೨೫೬೯ (೨೯೦೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚೆಗೆ ಅನ್ನಭಾಗ್ಯ ಯೋಜನೆಯ ಬಗ್ಗೆ ಅಧ್ಯಯನ ನಡೆಸಲಾಗಿದೆಯೆ ;

(ಆ) ಈ ಅಧ್ಯಯನವನ್ನು ಯಾರು ನಡೆಸಿದರು; ಮತ್ತು ಅಧ್ಯಯನದ ವರದಿಯಲ್ಲಿನ ಪ್ರಮುಖ ಅಂಶಗಳೇನು; ಅನ್ನಭಾಗ್ಯ ಯೋಜನೆಯಿಂದ ಸಮಾಜದ ಮೇಲೆ ಉಂಟಾಗಿರುವ ಪ್ರಯೋಜನ ಮತ್ತು ದುಷ್ಪರಿಣಾಮಗಳ ಕುರಿತು ವರದಿಯಲ್ಲಿದ್ದಲ್ಲಿ, ವಿವರ ನೀಡುವುದು ;

(ಇ) ಅನ್ನಭಾಗ್ಯ ಯೋಜನೆಯಿಂದ ಫಲಾನುಭವಿಗಳಲ್ಲಿ ಅಪೌಷ್ಟಿಕತೆ ಉಂಟಾಗಿರುವುದು ನಿಜವೆ; ಕಾರಣವೇನು ;

(ಈ) ಈ ಸಂಬಂಧ ಏನು ಕ್ರಮ ಕೈಗೊಳ್ಳಲಾಗುವುದು ;

(ಉ) ವರದಿಯ ಅನುಸಾರ ಈ ಯೋಜನೆಯಲ್ಲಿ ಯಾವ ರೀತಿಯ ಬದಲಾವಣೆಗಳನ್ನು ತರಲಾಗುವುದು ?

## ಇಂಡಿ ಅಥವಾ ಸಿಂಧಗಿಯಲ್ಲಿ ಸಾರಿಗೆ ಉಪ ಪ್ರಾದೇಶಿಕ ಕಚೇರಿ ಪ್ರಾರಂಭ.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೫೭೦ (೨೯೧೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಇಂಡಿ ಅಥವಾ ಸಿಂಧಗಿಯಲ್ಲಿ ಸಾರಿಗೆ ಉಪ ಪ್ರಾದೇಶಿಕ ಕಚೇರಿ ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ಕುರಿತು ಸರ್ಕಾರದ ಕ್ರಮ ಏನು ?

## ದೇವರಾಜು ಅರಸು ಸಂಶೋಧನಾ ಕೇಂದ್ರದ ಕಾರ್ಯಕ್ರಮಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೫೭೧ (೨೯೦೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶ್ರೀ ಡಿ.ದೇವರಾಜ ಅರಸು ಸಂಶೋಧನಾ ಕೇಂದ್ರ ಸ್ಥಾಪನೆಯಾಗಿದ್ದು ಯಾವಾಗ ;

(ಆ) ಸದರಿ ಸಂಶೋಧನಾ ಕೇಂದ್ರದ ವತಿಯಿಂದ ರಾಜ್ಯದಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಬಯಲುಸೀಮೆ ಹಾಗೂ ಮಲೆನಾಡು ಅಭಿವೃದ್ಧಿ ಪ್ರಾಧಿಕಾರ ಯೋಜನೆಗಳು.

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

೨೫೭೨ (೨೯೦೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೦೨ ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರ ಮತ್ತು ಮಲೆನಾಡು ಅಭಿವೃದ್ಧಿ ಪ್ರಾಧಿಕಾರಗಳಿಗೆ ಒದಗಿಸಿದ ಹಣ ಎಷ್ಟು ;

(ಆ) ಯಾವ ಯಾವ ಕಾರ್ಯಕ್ಕೆ ಎಷ್ಟೆಷ್ಟು ಹಣ ಹಂಚಿಕೆ ಮಾಡಲಾಗಿದೆ ;

(ಇ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ಈ ಪ್ರಾಧಿಕಾರಗಳಿಂದ ತೆಗೆದುಕೊಂಡ ಕಾರ್ಯ, ಒದಗಿಸಿದ ಹಣದ ಪೂರ್ಣ ವಿವರ ನೀಡುವುದು ?

## ಸಾರ್ವಜನಿಕರಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವುದು.

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

೨೫೭೩ (೨೯೦೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಸ್ವಯಂ ಸೇವಾ ಸಂಸ್ಥೆಗಳು, ಸರ್ಕಾರೇತರ ಸಂಘಟನೆಗಳು, ಮೂಢನಂಬಿಕೆಯನ್ನು ಹೋಗಲಾಡಿಸುವ,

ಪವಾಡ ಬಯಲು ಮಾಡುವ, ವೈಜ್ಞಾನಿಕ ಮನೋಭಾವ ಬೆಳೆಸುವ ಕಾರ್ಯದಲ್ಲಿ ತೊಡಗಿಕೊಂಡಿವೆ; (ಮಾಹಿತಿ ಒದಗಿಸುವುದು)

(ಆ) ಈ ರೀತಿ ಕಾರ್ಯ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸರ್ಕಾರದ ಯೋಜನೆ ಏನು ;

(ಇ) ಜನರಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಲು ಸರ್ಕಾರ/ಸರ್ಕಾರೇತರ ಸಂಸ್ಥೆಗಳ ಮೂಲಕ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ಹಾಗೂ ಅದಕ್ಕೆ ಒದಗಿಸುತ್ತಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಈ) ಪವಾಡ ಸಂಶೋಧನಾ ಕೇಂದ್ರ (ರಿ) ಇವರು ರಾಜ್ಯದಲ್ಲಿ ಪವಾಡ ಬಯಲು ಕಾರ್ಯಕ್ರಮ ವ್ಯಾಪಕವಾಗಿ ರಾಜ್ಯಾದ್ಯಂತ ಮಾಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸರ್ಕಾರಿ ವೈದ್ಯಕೀಯ ಕಾಲೇಜುಗಳು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

೨೫೭೪ (೨೯೧೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಯೋಜನೆ ರೂಪಿಸಲಾಗಿದೆಯೇ ;

(ಆ) ಹಾಗಾದರೆ, ಎಷ್ಟು ಕಾಲೇಜುಗಳನ್ನು ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗುವುದು ; (ವಿವರ ನೀಡುವುದು)

(ಇ) ಸದರಿ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳಿಗೆ ಕಲ್ಪಿಸಲಾದ ಅಂದಾಜು ಮೊತ್ತವೆಷ್ಟು; ಬಿಡುಗಡೆಗೊಳಿಸಲಾದ ಮೊತ್ತವೆಷ್ಟು;

(ಈ) ಕಾಮಗಾರಿಯು ಯಾವ ಹಂತದಲ್ಲಿದೆ; (ಪೂರ್ಣ ವಿವರ ನೀಡುವುದು)

(ಉ) ಸದರಿ ಕಾಲೇಜುಗಳಲ್ಲಿ ಬೋಧಕ/ಬೋಧಕೇತರರನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ;

(ಊ) ೨೦೧೫-೨೦೧೬ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಷ್ಟು ಕಾಲೇಜುಗಳನ್ನು ಪ್ರಾರಂಭಿಸಲು ಎಂ.ಸಿ.ಐ.ನಿಂದ (ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾ) ಅನುಮತಿ ಪಡೆಯಲಾಗಿದೆ;

(ಋ) ಸದರಿ ಕಾಲೇಜುಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗುತ್ತದೆ?

## ಕೊಪ್ಪಕ್ಕೆ ಬಸ್ ನಿಲ್ದಾಣ ಕಾಮಗಾರಿ ಪ್ರಾರಂಭಿಸದ ಬಗ್ಗೆ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೨೫೭೫ (೭೯೧೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕಿನ ಕೊಪ್ಪದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣ ಮಂಜೂರಾಗಿದ್ದರೂ ಇದುವರೆಗೂ ಕಾಮಗಾರಿ ಪ್ರಾರಂಭಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಹಾಗಾದರೆ, ಸದರಿ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ?

## ವೈದ್ಯ ಹುದ್ದೆಗಳ ಭರ್ತಿ ಬಗ್ಗೆ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೨೫೭೬ (೨೯೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು).

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಗುತ್ತಿಗೆ ಆಧಾರದ ಮೇಲೆ ಎಷ್ಟು ವೈದ್ಯರನ್ನು ನೇಮಕ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಗುತ್ತಿಗೆ ವೈದ್ಯರನ್ನು ಖಾಯಂಗೊಳಿಸಲು ಸರ್ಕಾರ ಚಿಂತಿಸಿದೆಯೆ;

(ಉ) ಖಾಲಿ ಇರುವ ವೈದ್ಯ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?

## ವಿದ್ಯಾಸಿರಿ ಯೋಜನೆ ಬಗ್ಗೆ.

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

೨೫೭೭ (೨೯೨೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿದ್ಯಾಸಿರಿ ಯೋಜನೆಯನ್ನು ಎಂದಿನಿಂದ ಜಾರಿಗೆ ತರಲಾಗಿದೆ ;

(ಆ) ವಿದ್ಯಾಸಿರಿ ಯೋಜನೆಯ ಮುಖ್ಯ ಉದ್ದೇಶಗಳೇನು; ಯಾವ ಮಾನದಂಡದ ಮೇಲೆ ವಿದ್ಯಾರ್ಥಿಗಳನ್ನು ಯೋಜನೆಯ ವ್ಯಾಪ್ತಿಗೆ ತರಲಾಗುವುದು ; (ಪೂರ್ಣ ವಿವರ ಸಲ್ಲಿಸುವುದು)

(ಇ) ಪ್ರಸಕ್ತ ಸಾಲಿನಲ್ಲಿ ವಿದ್ಯಾಸಿರಿ ಯೋಜನೆ ಅಡಿಯಲ್ಲಿ ಎಷ್ಟು ಮಂದಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ; ಅದರಲ್ಲಿ ಎಷ್ಟು ಮಂದಿಗೆ ಮಂಜೂರು ಮಾಡಲಾಗಿದೆ ; (ವಿವರ ಸಲ್ಲಿಸುವುದು)

(ಈ) ಕಳೆದ ಆಯವ್ಯಯದಲ್ಲಿ ಈ ಯೋಜನೆಗಾಗಿ ನಿಗದಿಗೊಳಿಸಲಾದ ಅನುದಾನದ ಮೊತ್ತವೆಷ್ಟು ?

## ಕೊಪ್ಪಕ್ಕೆ ಸರ್ಕಾರಿ ಬಸ್ಸಿನ ಸೌಲಭ್ಯ ಕಲ್ಪಿಸುವುದು

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

೨೫೭೮ (೨೯೧೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕಿನ ಮದ್ದೂರಿನಿಂದ ಕೊಪ್ಪಕ್ಕೆ ಸರ್ಕಾರಿ ಬಸ್ಸಿನ ಸೌಲಭ್ಯವಿಲ್ಲದ ಕಾರಣ, ಪ್ರಯಾಣಿಕರು ಖಾಸಗಿ

ಕಾರು ಹಾಗೂ ಲಗೇಜ್ ಆಟೋಗಳಲ್ಲಿ ಪ್ರಯಾಣಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಪ್ರಯಾಣಿಕರ ಸೌಕರ್ಯಕ್ಕಾಗಿ ಈ ಮಾರ್ಗದಲ್ಲಿ ಸರ್ಕಾರಿ ಬಸ್ಸಿನ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಸದರಿ ರಸ್ತೆಯಲ್ಲಿ ಸುಗಮವಾಗಿ ಬಸ್ಸಿನ ಸೌಲಭ್ಯ ಕಲ್ಪಿಸಲು ಕ್ರಮ ವಹಿಸಲಾಗುವುದು ;

(ಈ) ಕೊಪ್ಪ ಹೋಬಳಿ ಕೇಂದ್ರಕ್ಕೆ ಹೊಸದಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಘಟಕವನ್ನು ಮಂಜೂರು ಮಾಡಲು ಸರ್ಕಾರ ಚಿಂತಿಸಿದೆಯೇ ;

(ಉ) ಹಾಗಾದರೆ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ನರ್ಮ್ ಯೋಜನೆಯಡಿ ಕರ್ನಾಟಕ ರಾಜ್ಯ ಸಾರಿಗೆ ಇಲಾಖೆ ಪಡೆದುಕೊಂಡ ಬಸ್ಸುಗಳ ಕುರಿತು

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–

೨೫೭೭ (೨೯೧೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನರ್ಮ್ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ಸಾರಿಗೆ ಇಲಾಖೆ ಪಡೆದುಕೊಂಡ ಬಸ್ಸುಗಳು ಎಷ್ಟು; ಈ ಬಸ್ಸುಗಳನ್ನು ರಾಜ್ಯದ

ಯಾವ ಯಾವ ಭಾಗಕ್ಕೆ ಎಷ್ಟೆಷ್ಟು ನೀಡಲಾಗಿದೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನರ್ಮ್ ಯೋಜನೆಯನ್ವಯ ನೀಡಿರುವ ಬಸ್ಸುಗಳ ಸಂಖ್ಯೆ ಎಷ್ಟು; ಜಿಲ್ಲೆಯ ಯಾವ ಪ್ರಾದೇಶಿಕ ಸಾರಿಗೆ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಇ) ನಗರದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳನ್ನು ಓಡಿಸಲು ಇಲಾಖೆ ಕೈಗೊಂಡ ತೀರ್ಮಾನ ಕೈಬಿಡಲಾಗಿದೆಯೇ ;

(ಈ) ಮಂಗಳೂರು-ಮಣಿಪಾಲ ಹೈಟೆಕ್ ಹವಾ ನಿಯಂತ್ರಣ ಬಸ್ಸುಗಳ ಸಂಖ್ಯೆ ಎಷ್ಟು; ಗಳಿಕೆಯಲ್ಲಿ ಲಾಭದಲ್ಲಿದೆಯೇ; ನಷ್ಟದಲ್ಲಿದ್ದರೆ ಕಾರಣವೇನು ?

**ಕರ್ನಾಟಕ ರಾಜ್ಯದ ದಂತ ವೈದ್ಯಕೀಯ ಕಾಲೇಜುಗಳ ಕುರಿತು.**

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೫೮೦ (೨೯೧೧) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫-೧೬ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ಸಿ.ಇ.ಟಿ. ಮೂಲಕ ಪ್ರವೇಶ ಲಭ್ಯವಾಗುವ ಒಟ್ಟು ಸೀಟುಗಳ ಸಂಖ್ಯೆ ಎಷ್ಟು ;

(ಆ) ಯಾವ ಯಾವ ವರ್ಗಕ್ಕೆ ಎಷ್ಟು ಸೀಟುಗಳನ್ನು ಮೀಸಲಿಡಲಾಗಿದೆ ; (ವಿವರ ನೀಡುವುದು)

(ಇ) ಆಡಳಿತ ಮಂಡಳಿಯ ವತಿಯಿಂದ ಭರ್ತಿ ಮಾಡಲಾದ ಸೀಟುಗಳ ಸಂಖ್ಯೆ ಎಷ್ಟು; ಸರ್ಕಾರಕ್ಕೆ ನೀಡುವ ಸೀಟುಗಳ ಸಂಖ್ಯೆ ಎಷ್ಟು; (ಕಾಲೇಜುವಾರು, ಸಂಖ್ಯಾವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಒಟ್ಟು ಎಷ್ಟು ದಂತ ವೈದ್ಯಕೀಯ ಕಾಲೇಜುಗಳಿವೆ; ದಂತ ವೈದ್ಯಕೀಯ ಸೀಟುಗಳಿವೆ ; ಸರ್ಕಾರಕ್ಕೆ ನೀಡಬೇಕಾದ ಸೀಟುಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಧಾರ್ಮಿಕ ಸ್ಥಳಗಳಿಗೆ ಬಳಕೆ ಮಾಡುವ ಕುರಿತು.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೫೮೧ (೨೯೧೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಧಾರ್ಮಿಕ ಸ್ಥಳಗಳಾದ ದೇವಸ್ಥಾನ, ಚರ್ಚು ಮಸೀದಿ ಇವುಗಳ ಮೂಲಭೂತ ಸೌಕರ್ಯಗಳಿಗೆ ಬಳಕೆ ಮಾಡಲು ಇಲಾಖೆ ಅನುಮತಿ ನೀಡುವುದೆ; ಈ ಬಗ್ಗೆ ನಿರ್ಧಾರ ಕೈಗೊಳ್ಳಲಾಗಿದೆಯೇ ;

(ಆ) ರಾಜ್ಯದಲ್ಲಿ ೨೦೧೩-೧೪ರಲ್ಲಿ ಶಾಸಕರ ಪ್ರದೇಶಾಭಿವೃದ್ಧಿಯಡಿ ಬಿಡುಗಡೆಗೊಂಡ ಒಟ್ಟು ಅನುದಾನ ಎಷ್ಟು ; ಬಳಕೆಯಾದ ಅನುದಾನವೆಷ್ಟು ;

(ಇ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಕ್ರಿಯಾ ಯೋಜನೆಯನ್ನು ಸಲ್ಲಿಸಿದ್ದರೂ ವಿವಿಧ ಇಲಾಖೆಗಳು ಸೂಚಿಸಿದ ಕಾಮಗಾರಿಗಳನ್ನು ಕೈಗೊಳ್ಳದ ಅಧಿಕಾರಿಗಳ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ ; ೨೦೧೧-೧೨, ೨೦೧೨,೧೩, ೨೦೧೩-೧೪ರಲ್ಲಿ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಿಂದ ಬಳಕೆಯಾಗದ ಅನುದಾನ ಎಷ್ಟು? (ವಿವರ ನೀಡುವುದು)

## ಮಂಗಳೂರಿನ ಲೇಡಿಗೋಸನ್ ಸರ್ಕಾರಿ ಮಹಿಳಾ ಆಸ್ಪತ್ರೆಯ ಅನೆಕ್ಷರ್ ಕಟ್ಟಡ ಕಾಮಗಾರಿ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೫೮೨ (೭೯೨೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಗಳೂರಿನ ಲೇಡಿಗೋಸನ್ ಸರ್ಕಾರಿ ಮಹಿಳಾ ಆಸ್ಪತ್ರೆಯ ಅನೆಕ್ಸರ್ ಕಟ್ಟಡದ ಕಾಮಗಾರಿ ವಿಳಂಬಗೊಳ್ಳಲು ಕಾರಣವೇನು; ಈ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಆ) ಅನೆಕ್ಷರ್ ಕಟ್ಟಡದಲ್ಲಿ ಎಷ್ಟು ಹಾಸಿಗೆಗಳನ್ನು ಅಳವಡಿಸಲಾಗುವುದು ; ಯಾವ ಯಾವ ವಿಭಾಗಕ್ಕೆ ಅವಕಾಶ ಕಲ್ಪಿಸಲಾಗಿದೆ ;

(ಇ) ಈ ಅನೆಕ್ಷರ್ ಕಟ್ಟಡಕ್ಕೆ ಈವರೆಗೆ ಖರ್ಚು ಮಾಡಿದ ಒಟ್ಟು ಮೊತ್ತ ಎಷ್ಟು ?

# ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ನಿಗದಿಪಡಿಸಿರುವ ಅನುದಾನ.

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೮೩ (೨೯೧೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೪-೧೫ನೇ ಸಾಲಿನ ಆಯ-ವ್ಯಯದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ನಿಗದಿಪಡಿಸಿದ ಅನುದಾನವೆಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನವೆಷ್ಟು ; (ಇಲಾಖಾವಾರು ವಿವರ ನೀಡುವುದು)

(ಇ) ಇದರಲ್ಲಿ ಹೈದರಾಬಾದ್-ಕರ್ನಾಟಕ ವಿಭಾಗಕ್ಕೆ ಕಳೆದ ೨೦೧೩-೧೪, ೨೦೧೪-೧೫ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಎಷ್ಟು; (ಇಲಾಖಾವಾರು ವಿವರ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ವೆಚ್ಚ ಮಾಡಿದ ಅನುದಾನವೆಷ್ಟು ? (ಇಲಾಖಾವಾರು ವಿವರ ನೀಡುವುದು)

# ವಿಧಾನ ಪರಿಷತ್ತು ಸದಸ್ಯರಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೮೪ (೨೯೭೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ವಿಧಾನ ಪರಿಷತ್ ಸದಸ್ಯರಿಗೆ ಕರ್ನಾಟಕ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಬಿಡುಗಡೆಯಾಗ ಬೇಕಾಗಿದ್ದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; (ಸದಸ್ಯರವಾರು ಮಾಹಿತಿ ನೀಡುವುದು)

(ಆ) ಬಿಡುಗಡೆಯಾಗಿರುವ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಎಷ್ಟು; ಮುಕ್ತಾಯವಾಗಿರುವ ಕಾಮಗಾರಿಗಳು ಎಷ್ಟು; ಪ್ರಗತಿಯಲ್ಲಿರುವ ಕಾಮಗಾರಿಗಳು ಎಷ್ಟು; ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿರುವ ಕಾಮಗಾರಿಗಳು ಎಷ್ಟು ;

(ಇ) ಆಡಳಿತಾತ್ಮಕ ಅನುಮೋದನೆ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಅಂತರರಾಷ್ಟ್ರೀಯ ಆಯುರ್ವೇದ ಸಂಸ್ಥೆಯನ್ನು ಸ್ಥಾಪಿಸುವ ಬಗ್ಗೆ .

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೫೮೫ (೭೯೩೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದಿಂದ ಅಂತರರಾಷ್ಟ್ರೀಯ ಆಯುರ್ವೇದ ಸಂಸ್ಥೆಯನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ, ಈ ಸಂಸ್ಥೆಯ ರೂಪುರೇಷಗಳೇನು ;

(ಆ) ಸದರಿ ಸಂಸ್ಥೆಯನ್ನು ಕರ್ನಾಟಕ ರಾಜ್ಯದಲ್ಲಿ ಸ್ಥಾಪಿಸುವ ನಿಟ್ಟಿನಲ್ಲಿ ಕೇಂದ್ರದ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಇ) ಪ್ರಸ್ತಾವನೆ ಇಲ್ಲದಿದ್ದರೆ, ರಾಜ್ಯ ಸರ್ಕಾರ ಸದರಿ ಸಂಸ್ಥೆಯನ್ನು ಕರ್ನಾಟಕದಲ್ಲಿ ಸ್ಥಾಪಿಸಲು ಕೇಂದ್ರದ ಮೇಲೆ ಒತ್ತಡ ತರಲು ಮುಂದಾಗುವುದೇ; ಕೈಗೊಂಡ ಕ್ರಮಗಳ ಬಗ್ಗೆ ವಿವರ ನೀಡುವುದು ?

## ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾರಿಗೆ ಸಂಸ್ಥೆಗಳು ಹಾಗೂ ಹೈಟೆಕ್ ಬಸ್‌ಗಳ ಬಗ್ಗೆ .

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೫೮೬ (೭೯೩೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾರಿಗೆ ಸಂಸ್ಥೆಗಳು ಯಾವುವು ; ಸದರಿ ಸಂಸ್ಥೆಗಳ ಅಡಿಯಲ್ಲಿ ಇರುವ ಹೈಟೆಕ್

ಬಸ್‌ಗಳ (BENZ / VOLVO) ಸಂಖ್ಯೆ ಎಷ್ಟು; ( ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಸದರಿ ಸಂಸ್ಥೆಗಳಲ್ಲಿ ಹೈಟೆಕ್ ಬಸ್‌ಗಳಿಗಾಗಿ (BENZ / VOLVO) ಕಂಪನಿಗಳಿಂದ ತರಬೇತಿ ಹೊಂದಿದ ನುರಿತ ಚಾಲಕರು ಹಾಗೂ ಮೆಕ್ಯಾನಿಕ್‌ಗಳ ಕೊರತೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಇದ್ದರೆ, ಸಂಸ್ಥೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಬಸ್‌ಗಳ ಚಾಲನೆಗೆ ಹಾಗೂ ದುರಸ್ತಿಗಾಗಿ ತರಬೇತಿ ಹೊಂದಿದ ನುರಿತ ಸಿಬ್ಬಂದಿ ಕೊರತೆಯಿಂದ ಅಪಘಾತಗಳು ಸಂಭವಿಸಿ ಹಾಗೂ ನಿರ್ವಹಣೆ/ದುರಸ್ತಿ ಕೊರತೆಯಿಂದ ಸಂಸ್ಥೆಗಳಿಗೆ ನಷ್ಟ ಉಂಟಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ? (ಸಂಸ್ಥೆವಾರು, ನಷ್ಟದ ಸಂಪೂರ್ಣ ಮಾಹಿತಿ ನೀಡುವುದು

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಎ.ಪಿ.ಎಲ್ ಮತ್ತು ಬಿ.ಪಿ.ಎಲ್. ಪಡಿತರ ಚೀಟಿಗಳ ಬಗ್ಗೆ .

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೫೮೭ (೨೯೩೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿರುವ ಎ.ಪಿ.ಎಲ್., ಬಿ.ಪಿ.ಎಲ್. ಹಾಗೂ ಇತರೆ ಪಡಿತರ ಚೀಟಿಗಳ ಒಟ್ಟು ಸಂಖ್ಯೆ ಎಷ್ಟು ; ( ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೦೧–೦೫–೨೦೧೩ ರಿಂದ ೩೧–೦೧–೨೦೧೫ ರವರೆಗೆ ಈ ಜಿಲ್ಲೆಗಳಿಂದ ಹೊಸದಾಗಿ ಬಿ.ಪಿ.ಎಲ್., ಎ.ಪಿ.ಎಲ್., ಮತ್ತು ಇತರೆ ಪಡಿತರ ಚೀಟಿ ಕೋರಿ ಬಂದಿರುವ ಅರ್ಜಿಗಳೆಷ್ಟು ; ಈ ಪೈಕಿ ಎಷ್ಟು ವಿತರಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬಾಕಿ ಇರುವ ಅರ್ಜಿದಾರರಿಗೆ ಶೀಘ್ರವಾಗಿ ಪಡಿತರ ಚೀಟಿ ವಿತರಿಸಲು ಕೈಗೊಂಡಿರುವ ಕ್ರಮಗಳೇನು ?

**ನಗರ ಪ್ರದೇಶಗಳ ಬಡಾವಣೆಗಳಿಗೆ ಮಿನಿ ಬಸ್ ಸಂಚಾರಣೆ ಬಗ್ಗೆ .**

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೫೮೮ (೨೯೨೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆಯಿಂದ ನಗರ ಪ್ರದೇಶಗಳ ಬಡಾವಣೆಗಳ ನಾಗರೀಕರ ಅನುಕೂಲಕ್ಕಾಗಿ ಮಿನಿ ಬಸ್‌ಗಳನ್ನು ಸಂಚಾರಕ್ಕೆ ತರುವ ಯೋಜನೆ ಸರ್ಕಾರದ ಮುಂದಿದೆಯೇ ; (ಇದ್ದರೆ, ವಿವರ ನೀಡುವುದು)

(ಆ) ಹೈದರಬಾದ್ – ಕರ್ನಾಟಕ ಭಾಗದ ಆರು ಜಲ್ಲೆಗಳು ಮತ್ತು ಹರಪನಹಳ್ಳಿಗೆ ಎಷ್ಟು ಮಿನಿ ಬಸ್‌ಗಳನ್ನು ಸಾರ್ವಜನಿಕರ ಪ್ರಯಾಣಕ್ಕೆ ಬಿಡಲಾಗಿದೆ ; (ನಗರವಾರು ಮಿನಿ ಬಸ್ಸ್‌ಗಳ ಸಂಖ್ಯೆ ನೀಡುವುದು)

(ಇ) ನಗರ ಪ್ರದೇಶಗಳ ನಾಗರೀಕರಿಗೆ ಅನುಕೂಲಕ್ಕಾಗಿ ಸಂಚರಿಸುವ ಈ ಮಿನಿ ಬಸ್ಸ್‌ಗಳನ್ನು ಯಾವಾಗಿನಿಂದ ಜಾರಿಗೆ ತರಲಾಗುವುದು ? (ಮಾಹಿತಿ ನೀಡುವುದು)

## ಗಡಿ–ಭಾಗದಲ್ಲಿ ಸಾರಿಗೆ ಸೌಲಭ್ಯ ಹೆಚ್ಚಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೫೮೯(೨೯೬೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಂದ್ರ ಪ್ರದೇಶ ರಾಜ್ಯಕ್ಕೆ ಹೊಂದಿಕೊಂಡಿರುವ ಗಡಿ ಪ್ರದೇಶಗಳಲ್ಲಿ ಕಡಿಮೆ ಬಸ್ ಓಡಾಟವಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ನಿಜವೇ;

(ಆ) ಚಿಂತಾಮಣಿ ತಾಲ್ಲೂಕಿನ ಬಿ.ಕೊತ್ತಕೋಟೆಯಿಂದ ಭಟ್ರಹಳ್ಳಿ ಮಾರ್ಗದಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಇಲ್ಲದಿರುವುದರಿಂದ ಜನರು ಖಾಸಗಿ ಬಸ್‌ಗಳನ್ನು ಆಶ್ರಯಿಸಿಕೊಂಡಿರಬೇಕಾಗಿರುವುದು ನಿಜವೇ;

(ಇ) ಹಾಗಿದ್ದಲ್ಲಿ ಗಡಿಭಾಗದ ಹಳ್ಳಿಗಳಿಗೆ ಹೆಚ್ಚಿನ ಸಾರಿಗೆ ವ್ಯವಸ್ಥೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಚಿಂತಾಮಣಿ ತಾಲ್ಲೂಕಿನಲ್ಲಿ ಹೆಚ್ಚಿನ ಸಾರಿಗೆ ವ್ಯವಸ್ಥೆ ಕಲ್ಪಿಸಲು ಕೈಗೊಳ್ಳಲಿರುವ ಕ್ರಮಗಳೇನು ?

## ನೂತನ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೫೯೦ (೭೯೫೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಸಾಲಿನ ಆಯವ್ಯಯದಲ್ಲಿ ನೂತನವಾಗಿ ೬ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸುವುದಾಗಿ ಸರ್ಕಾರ ಘೋಷಣೆ ಮಾಡಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಯಾವ ಯಾವ ಸ್ಥಳಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸಲು ಸರ್ಕಾರ ನಿರ್ಧರಿಸಿತ್ತು;

(ಇ) ಈ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು;

(ಈ) ಇಲ್ಲಿಯವರೆಗೆ ಈ ಕಾಲೇಜುಗಳ ಆರಂಭಕ್ಕೆ ಖರ್ಚು ಮಾಡಿದ ಅನುದಾನ ಎಷ್ಟು;

(ಇ) ಪ್ರತಿ ಜಿಲ್ಲೆಗೊಂದು ಹೊಸ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಸರ್ಕಾರದ ನೀತಿಯಂತೆ ಕಾಲೇಜುಗಳಿಲ್ಲದ ಜಿಲ್ಲೆಗಳಿಗೆ ಯಾವಾಗ ಕಾಲೇಜುಗಳನ್ನು ಮಂಜೂರು ಮಾಡಲಾಗುವುದು?

## ಬ್ಲಡ್ ಬ್ಯಾಂಕ್‌ಗಳನ್ನು ಸ್ಥಾಪಿಸುವ ಬಗ್ಗೆ .

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೫೯೧ (೨೯೨೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಪ್ರತಿ ತಾಲ್ಲೂಕು ಕೇಂದ್ರ ಸ್ಥಾನಗಳಲ್ಲಿ ರಕ್ತ ನಿಧಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆಯೇ ;

(ಆ) ಪ್ರತಿ ತಾಲ್ಲೂಕು ಕೇಂದ್ರ ಸ್ಥಾನದ ಆಸ್ಪತ್ರೆಗಳಲ್ಲಿ ರಕ್ತ ನಿಧಿ ಕೇಂದ್ರ ಸ್ಥಾಪನೆಗೆ ಸರ್ಕಾರ ಚಿಂತನೆ ನಡೆಸಿದೆಯೇ;

(ಇ) ಹಾಗಿದ್ದಲ್ಲಿ, ಯಾವಾಗ ಈ ರಕ್ತ ನಿಧಿ ಕೇಂದ್ರ ಕಾರ್ಯಾರಂಭ ಮಾಡಲಿವೆ? (ವಿವರವಾಗಿ ಮಾಹಿತಿ ಕೊಡುವುದು)

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿರುವ ಹುದ್ದೆಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೫೯೨ (೨೯೬೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಯಾವ ಯಾವ ಶ್ರೇಣಿಯ ಹುದ್ದೆಗಳಿವೆ;

(ಆ) ಈ ಹುದ್ದೆಗಳಿಗೆ ನಿಗದಿಪಡಿಸಿದ ವೇತನ ಶ್ರೇಣಿ ಹಾಗೂ ವಿದ್ಯಾರ್ಹತೆ ಯಾವುದು;

(ಇ) ಪಾರುಪತ್ತೆದಾರ ಹುದ್ದೆಗಳ ವೇತನ ಶ್ರೇಣಿ ಯಾವುದು;

(ಈ) ೨೦೦೭ ರಲ್ಲಿ ಪಾರುಪತ್ತೆದಾರ ಹುದ್ದೆಗಳಿಗೆ ಹಾಜರಾದವರಿಗೆ ಈಗ ಸಿಗುತ್ತಿರುವ ಒಟ್ಟು ವೇತನವೆಷ್ಟು?

## ಗಂಗಾಕಲ್ಯಾಣ ಯೋಜನೆಯಡಿ ಕೊರೆದ ಬೋರ್‌ವೆಲ್‌ಗಳು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೯೩ (೩೦೧೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಕೊರೆಸಿರುವ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಅವುಗಳಲ್ಲಿ ಎಷ್ಟು ಬೋರ್‌ವೆಲ್‌ಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ ? (ತಾಲ್ಲೂಕುವಾರು ವಿವರ ಒದಗಿಸುವುದು)

## ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ K.P.M.I. ಕಾಯ್ದೆ ಕುರಿತು .

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೫೯೪ (೨೯೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) (ಕೆ.ಪಿ.ಎಂ.ಐ.,) ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯ್ದೆಯು ಪ್ರಕಾರ ಖಾಸಗಿ ವೈದ್ಯಕೀಯು ಸಂಸ್ಥೆಗಳ

ಪರಿವೀಕ್ಷಣೆಗಾಗಿ ರಚಿಸಿರುವ ಜಿಲ್ಲಾ ಮಟ್ಟದ ಸಮಿತಿ ನಕಲಿ ವೈದ್ಯರ ಹಾವಳಿ ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ;

(ಆ) ಕೆ.ಪಿ.ಎಂ.ಐ., ಕಾಯ್ದೆಯ ಅಡಿಯಲ್ಲಿ ಪರವಾನಿಗೆ ಇಲ್ಲದ ಒಟ್ಟು ಎಷ್ಟು ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿರುದ್ಧ ಕ್ರಮ ಜರುಗಿಸಲಾಗಿದೆ ;

(ಇ) ನಕಲಿ ವೈದ್ಯರ ವಿರುದ್ಧ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳು ಎಷ್ಟು ;

(ಈ) ಕೆ.ಪಿ.ಎಂ.ಐ., ಕಾಯ್ದೆಯ ಅಡಿಯಲ್ಲಿ ಎಷ್ಟು ಜಿಲ್ಲೆಗಳಲ್ಲಿ ಸಮಿತಿಗಳನ್ನು ರಚಿಸಲಾಗಿದೆ ಮತ್ತು ಆ ಸಮಿತಿಗಳು ಕಾರ್ಯ ಪ್ರವೃತ್ತವಾಗಿವೆಯೇ ?

## ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿನ ಭ್ರಷ್ಟಾಚಾರದ ಬಗ್ಗೆ.

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೯೫ (೨೯೨೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಪ್ರಾದೇಶಿಕ ಸಾರಿಗೆ ಕಛೇರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಕಛೇರಿಗಳಲ್ಲಿ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದಯೇ ;

(ಇ) ಹಾಗಿದ್ದಲ್ಲಿ, ಯಾವ ಯಾವ ಹುದ್ದೆಗಳಲ್ಲಿ ಎಷ್ಟು ಸಿಬ್ಬಂದಿಯ ಕೊರತೆ ಇದೆ ; (ಹುದ್ದೆವಾರು ಮಾಹಿತಿ ನೀಡುವುದು)

(ಈ) ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಕಳೆದ ಮೂರು ವರ್ಷಗಳಿಂದ ರಾಜ್ಯದ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ನಡೆದಿರುವ ಭ್ರಷ್ಟಾಚಾರ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಊ) ಬೆಂಗಳೂರಿನ ಕೆ.ಆರ್.ಪುರ ಮತ್ತು ಗೋಕಾಕ್ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ವ್ಯಾಪಕವಾಗಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಹಾಗಿದ್ದಲ್ಲಿ, ಸದರಿ ಕಛೇರಿಗಳಲ್ಲಿ ಭ್ರಷ್ಟಾಚಾರವೆಸಗಿದ /ಭಾಗಿಯಾದ ಅಧಿಕಾರಿ/ನೌಕರರು ಯಾರು ; ಅವರುಗಳ ವಿರುದ್ಧ ಸರ್ಕಾರ ಕೈಗೊಂಡ ಶಿಸ್ತಿನ ಕ್ರಮವೇನು ; ಇವರುಗಳಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ನಷ್ಟವೆಷ್ಟು ; ಸದರಿ ನಷ್ಟವನ್ನು ತಪ್ಪಿತಸ್ಥರಿಂದ ವಸೂಲಿ ಮಾಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ;

(ಎ) ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಗುತ್ತಿಗೆ ಆಧಾರಿತ ಅಥವಾ ಕಛೇರಿಯ ಸಿಬ್ಬಂದಿಯಿಂದ ನೇಮಕಗೊಂಡ ಸಿಬ್ಬಂದಿ ಮುಖೇನ ಸರ್ಕಾರಿ ಸಿಬ್ಬಂದಿ ಭ್ರಷ್ಟಾಚಾರ ನಡೆಸುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಏ) ಹಾಗಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳುವುದು ?

## ಎಂಡೋ ಸಂತ್ರಸ್ತರ ಬಗ್ಗೆ .

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೯೬ (೨೯೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಎಂಡೋಸಲ್ಫಾನ್ ಪೀಡಿತ ಸಂತ್ರಸ್ತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಎಂಡೋಸಲ್ಫಾನ್ ಸಂತ್ರಸ್ತರಿಗೆ ಪ್ರತಿಯೊಬ್ಬರಿಗೆ ಸರ್ಕಾರ ನೀಡುತ್ತಿರುವ ಮಾಸಾಶನ ಮೊತ್ತ ಎಷ್ಟು ;

(ಇ) ಯಾವ ದಿನಾಂಕ/ವರ್ಷದಿಂದ ಇವರುಗಳಿಗೆ ಸರ್ಕಾರ ಮಾಸಾಶನ ನೀಡುತ್ತಿದೆ ;

(ಈ) ಮಾಸಾಶನಕ್ಕೆ ಅರ್ಹತೆ ಹೊಂದಲು ಸಂತ್ರಸ್ತರಿಗೆ ಸರ್ಕಾರ ಯಾವ ರೀತಿಯ ನಿಬಂಧನೆಗಳನ್ನು ಹಾಕಿದೆ ;

(ಉ) ಕಳೆದ ಒಂದು ವರ್ಷದಿಂದ ಇದುವರೆವಿಗೂ ಇವರ ಮಾಸಾಶನಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಬಹುತೇಕ ಸಂತ್ರಸ್ತರು ಮಾಸಾಶನದಿಂದ ವಂಚಿತರಾಗಿರುವುದು ಸರ್ಕಾರ ಗಮನಿಸಿದೆಯೇ ;

(ಋ) ಮಾಸಾಶನ ಪಡೆಯಲು ಅರ್ಹ ಮತ್ತು ಆಯ್ಕೆಯಾದ ಎಂಡೋ ಸಂತ್ರಸ್ತರಿಗೆ ೧ ವರ್ಷ ೮ ತಿಂಗಳಾದರೂ ಮಾಸಾಶನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಎ) ಹಾಗಿದ್ದಲ್ಲಿ, ಅಸಹಾಯಕ ಸಂತ್ರಸ್ತರಿಗೆ ಮಾಸಾಶನ ಪ್ರತಿ ತಿಂಗಳು ಸರಿಯಾದ ಸಮಯಕ್ಕೆ ನೀಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ?

## ಚಾಲಕ / ನಿರ್ವಾಹಕರಿಗೆ ಮೇಲಾಧಿಕಾರಿಗಳಿಂದ ಆಗುತ್ತಿರುವ ಕಿರುಕುಳ .

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೯೭ (೨೯೩೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಕೆ.ಎಸ್.ಆರ್.ಟಿ.ಸಿ., ಮತ್ತು ಬಿ.ಎಂ.ಟಿ.ಸಿ. ಬಸ್‌ಗಳ ಚಾಲಕ ಮತ್ತು ನಿರ್ವಾಹಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಚಾಲಕ/ನಿರ್ವಾಹಕ ಮತ್ತು ಕೆಳವರ್ಗದ ನೌಕರರುಗಳಿಗೆ ತಮ್ಮ ಮೇಲಾಧಿಕಾರಿಗಳು (ಡಿಪೋ ವ್ಯವಸ್ಥಾಪಕರು) ನೀಡುವ

ಕಿರುಕುಳದಿಂದಾಗಿ ಸಾಕಷ್ಟು ನೌಕರರು ತಮ್ಮ ಕೆಲಸಕ್ಕೆ ರಾಜೀನಾಮೆ ನೀಡುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿದೆ ; ಎಷ್ಟು ಜನ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗಿದೆ ? (ವಿವರ ನೀಡುವುದು)

**ಮೂತ್ರಪಿಂಡಗಳ ಖಾಯಿಲೆ ಚಿಕಿತ್ಸೆ ದುಬಾರಿಯಾಗಿರುವ ಬಗ್ಗೆ .**

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೯೮ (೨೯೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೂತ್ರಪಿಂಡಗಳ ಖಾಯಿಲೆಗೆ ಚಿಕಿತ್ಸಾ ವೆಚ್ಚವು ದುಬಾರಿಯಾಗಿರುವುದರಿಂದ ಜನಸಾಮಾನ್ಯರು ಹೆಚ್ಚು ಸಂಖ್ಯೆಯಲ್ಲಿ ಬಲಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪೂರ್ಣ ಪ್ರಮಾಣದ ಚಿಕಿತ್ಸಾ ವ್ಯವಸ್ಥೆಯನ್ನು ಏರ್ಪಡಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ;

(ಇ) ಈ ಕುರಿತು ಸಾರ್ವಜನಿಕರಲ್ಲಿ ಆರೋಗ್ಯದ ಜಾಗೃತಿ ಮೂಡಿಸಲು ಸರ್ಕಾರ ಯಾವುದಾದರೂ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆಯೇ ;

(ಈ) ಮೂತ್ರಪಿಂಡ ಖಾಯಿಲೆ ನಿಯಂತ್ರಣಕ್ಕೆ ಅಂತರರಾಷ್ಟ್ರೀಯ ಸಂಸ್ಥೆಗಳ ಸಹಕಾರ ಪಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

# ಮಂಡ್ಯ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯಲ್ಲಿನ ಯೋಜನೆಗಳ ಬಗ್ಗೆ .

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೪೯ (೨೯೩೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿವಿಧ ಯೋಜನೆಗಳಿಗೆ ವೆಚ್ಚ ಮಾಡಿರುವ ಅನುದಾನವೆಷ್ಟು ; (ಯೋಜನಾವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಅರ್ಧಕ್ಕೆ ನಿಂತಿರುವ ಮತ್ತು ಕಳಪೆ ಕಾಮಗಾರಿಗಳಿಂದ ಕೂಡಿರುವ ಯೋಜನೆಗಳೆಷ್ಟು ; (ಯೋಜನಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಇಲಾಖೆಯಲ್ಲಿ ಪತ್ತೆಯಾಗಿರುವ ಅಧಿಕಾರ ದುರಪಯೋಗ, ಅವ್ಯವಹಾರ ಮತ್ತು ಹಣಕಾಸು ದುರಪಯೋಗದ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಸದರಿ ಪ್ರಕರಣಗಳಲ್ಲಿ ಭಾಗಿಯಾದ ಅಧಿಕಾರಿ/ನೌಕರರುಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಳಗಾವಿಯಲ್ಲಿ ಐ.ಟಿ. ಪಾರ್ಕ್ ಪ್ರಾರಂಭಿಸುವ ಬಗ್ಗೆ.

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೬೦೦ (೨೯೩೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯಲ್ಲಿ ಐ.ಟಿ.ಪಾರ್ಕ್ ಪ್ರಾರಂಭಿಸಲು ಮೂಲಭೂತ ಸೌಕರ್ಯಗಳಾದ ಸ್ಥಳ, ನೀರು, ವಿದ್ಯುಚ್ಛಕ್ತಿ, ವಿಮಾನಯಾನ ಸೌಕರ್ಯ ಇದ್ದರೂ ಕೂಡಾ ಸರ್ಕಾರ ಇನ್ನೂ ಹೆಚ್ಚಿನ ಸೌಲಭ್ಯಗಳನ್ನು ಒದಗಿಸಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಇಂಜಿನಿಯರಿಂಗ್ ಹಾಗೂ ಡಿಪ್ಲೋಮಾ ಕಾಲೇಜುಗಳು ಇದೆ ; ಇಲ್ಲಿ ಐ.ಟಿ. ಇಂಡಸ್ಟ್ರಿಗೆ ಬೇಕಾಗುವ ತರಬೇತಿ ಪಡೆದ ಕಾರ್ಮಿಕರು ಇರುವ ಸಂಗತಿ ನಿಜವೇ ;

(ಇ) ಇಲ್ಲಿ ಐ.ಟಿ. ಪಾರ್ಕ್ ಪ್ರಾರಂಭಿಸಲು ಏನಾದರೂ ತೊಂದರೆ ಇದೆಯೇ ;

(ಈ) ಬೆಂಗಳೂರು, ಮೈಸೂರುಗಳಲ್ಲಿ ಐ.ಟಿ. ಪ್ರಾರಂಭಿಸಲು ಸರ್ಕಾರ ಹೆಚ್ಚಿನ ಆಸಕ್ತಿ ತೋರದೆ ಉತ್ತರ ಕರ್ನಾಟಕದಲ್ಲಿ ಪ್ರಾರಂಭ ಮಾಡುವಲ್ಲಿ ಪ್ರಯತ್ನ ಮಾಡಲಾಗುವುದೆ ;

(ಉ) ಬಾಗಲಕೋಟೆ ಹಾಗೂ ವಿಜಯಪುರಗಳಲ್ಲಿ ಇಂಜಿನಿಯರಿಂಗ್ ಡಿಪ್ಲೋಮಾ ಕಾಲೇಜುಗಳಿದ್ದು, ಇಲ್ಲಿ ತರಬೇತಿ ಪಡೆದ ಕಾರ್ಮಿಕರು ಹಾಗೂ ಎಲ್ಲಾ ಮೂಲಭೂತ ಸೌಕರ್ಯಗಳು ಇರುವುದರಿಂದ ಐ.ಟಿ.ಪಾರ್ಕ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಬಿ.ಪಿ.ಎಲ್ ಕಾರ್ಡುಗಳನ್ನು ಒದಗಿಸುವುದು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೬೦೧ (೭೯೪೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸದಾಗಿ ಬಿ.ಪಿ.ಎಲ್ ಕಾರ್ಡುಗಳನ್ನು ಒದಗಿಸುವ ಸಲುವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ಸ್ಥಗಿತಗೊಳಿಸಲಾದ ಸಂಗತಿ ನಿಜವೇ ;

(ಆ) ಹಾಗಿದ್ದಲ್ಲಿ, ಎಂದಿನಿಂದ ಪುನಃ ಪ್ರಾರಂಭಿಸಲಾಗುವುದು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಬಿ.ಪಿ.ಎಲ್. ಕಾರ್ಡುಗಳನ್ನು ಕೋರಿ ಎಷ್ಟು ಅರ್ಜಿ ಬಂದಿರುತ್ತದೆ ; ಅದರಲ್ಲಿ ಎಷ್ಟು ಜನರಿಗೆ ಬಿ.ಪಿ.ಎಲ್ ಕಾರ್ಡು ನೀಡಲಾಗಿದೆ ; ಎಷ್ಟು ಅರ್ಜಿಗಳು ಯಾವ ಕಾರಣಗಳಿಗಾಗಿ ತಿರಸ್ಕೃತಗೊಂಡಿದೆ ; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಯಲ್ಲಿ ಬಿ.ಪಿ.ಎಲ್. ಕಾರ್ಡುಗಳನ್ನು ಕೋರಿ ಒಟ್ಟು ಎಷ್ಟು ಅರ್ಜಿ ಬಂದಿರುತ್ತದೆ ;

ಅದರಲ್ಲಿ ಎಷ್ಟು ಜನರಿಗೆ ಬಿ.ಪಿ.ಎಲ್. ಕಾರ್ಡು ನೀಡಲಾಗಿದೆ ; ಎಷ್ಟು ಅರ್ಜಿಗಳು ಯಾವ ಕಾರಣಗಳಿಗಾಗಿ ತಿರಸ್ಕೃತಗೊಂಡಿವೆ ; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಗ್ರಾಮೀಣ ಪ್ರದೇಶಗಳ ಸಂಚಾರಕ್ಕೆ ಹೊಸ ಬಸ್ಸುಗಳನ್ನು ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೬೦೨ (೨೯೪೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಗ್ರಾಮೀಣ ಪ್ರದೇಶದಲ್ಲಿ ಸಾರಿಗೆ ಸಂಸ್ಥೆಯವರು ನಿಷ್ಕ್ರಿಯವಾದ, ಹಳೆಯ ಬಸ್ಸುಗಳನ್ನು ಓಡಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಘಟಕದ ವ್ಯವಸ್ಥಾಪಕರು ಗ್ರಾಮೀಣ ಭಾಗಕ್ಕೆ ಪುನಃ ಹಳೆಯ ವಾಹನಗಳನ್ನೇ ಓಡಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೊಸದಾಗಿ ನೀಡಲಾಗುವ ಬಸ್ಸುಗಳನ್ನು ಈ ವರ್ಷ ಬೆಳಗಾವಿ, ಬಾಗಲಕೋಟೆ, ಹಾಗೂ ವಿಜಯಪುರ ಜಿಲ್ಲೆಗೆ ಎಷ್ಟು ಹೊಸ ಬಸ್ಸುಗಳನ್ನು ಕೊಡಲಾಗಿದೆ ; (ಘಟಕವಾರು ಮಾಹಿತಿ ನೀಡುವುದು)

(ಈ) ಬೈಲಹೊಂಗಲ ಘಟಕದಲ್ಲಿ ನಿಷ್ಕ್ರೀಯವಾದ ಬಸ್ಸುಗಳನ್ನು ಗ್ರಾಮೀಣ ಪ್ರದೇಶದಲ್ಲಿ ಓಡಿಸುತ್ತಿರುವ ಸಂಗತಿ ನಿಜವೇ ; ಹಾಗಿದ್ದಲ್ಲಿ,

ಘಟಕಕ್ಕೆ ಬಂದ ಎಷ್ಟು ಹೊಸ ಬಸ್ಸುಗಳನ್ನು ಗ್ರಾಮೀಣ ಭಾಗದಲ್ಲಿ ಓಡಿಸಲಾಗುತ್ತಿದೆ ;

(ಉ) ಬೆಳಗಾವಿ ಜಿಲ್ಲೆಯಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯವರಿಗಿಂತ ಖಾಸಗಿ ಟೆಂಪೋದವರು ವೇಳೆಗೆ ಸರಿಯಾಗಿ ಉತ್ತಮ ಗಾಡಿಗಳನ್ನು ಓಡಿಸುತ್ತಿರುವ ಸಂಗತಿ ನಿಜವೇ ; ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಖಾಸಗಿ ಟೆಂಪೋಗಳು ರಿಜಿಸ್ಟರ್ ಆಗಿರುತ್ತವೆ ;

(ಊ) ಬೆಳಗಾವಿ ಜಿಲ್ಲೆಯ ಘಟಕಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆಯೇ ;

(ಋ) ಬೈಲಹೊಂಗಲ ಘಟಕದಿಂದ ನಗರ ಸಾರಿಗೆ ಬಸ್ಸುಗಳನ್ನು ಓಡಿಸಲು ಕ್ರಮ ಕೈಗೊಳ್ಳಲಾಗಿದೆಯೇ ; ಇಲ್ಲವಾದಲ್ಲಿ, ಇದಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ನಗರ ಬಸ್ಸು ಸಂಚಾರವನ್ನು ಪ್ರಾರಂಭಿಸಲಾಗುವುದು ?

## ರಾಜ್ಯ ಯೋಜನಾ ಆಯೋಗದ ಸಲಹೆಗಳು

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೬೦೩ (೨೯೩೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಯೋಜನಾ ಆಯೋಗದದಿಂದ ಯಾವ-ಯಾವ ಯೋಜನೆಗಳನ್ನು ರಾಜ್ಯದಲ್ಲಿ ಕೈಗೊಳ್ಳಬಹುದೆಂಬ ಸಲಹೆ ನೀಡಲಾಗಿದೆ, ಆ ಸಲಹೆಗಳು ಯಾವುವು ;

(ಆ) ಯೋಜನಾ ಆಯೋಗ ನೀಡಿದ ಯಾವ-ಯಾವ ಸಲಹೆಗಳನ್ನು ಸರ್ಕಾರ ಒಪ್ಪಿಕೊಂಡಿದೆ ;

(ಇ) ರಾಜ್ಯ ಸರ್ಕಾರದ ಯೋಜನಾ ಆಯೋಗದಲ್ಲಿ ಕೇವಲ ಅಧ್ಯಕ್ಷರನ್ನು ನೇಮಿಸಲಾಗಿದ್ದು, ಆಯೋಗಕ್ಕೆ ಸಲಹೆ ನೀಡಲು ಸದಸ್ಯರನ್ನು ನೇಮಿಸಲಾಗುವುದೇ ;

(ಈ) ಈ ಆಯೋಗದ ಕಾರ್ಯವ್ಯಾಪ್ತಿ ಏನು ?

## ಹೊಸ ಮೆಡಿಕಲ್ ಕಾಲೇಜು ಸ್ಥಾಪನೆ ಹಾಗೂ ಮೆಡಿಕಲ್ ಸೀಟ್‌ಗಳ ಲಭ್ಯತೆ ಬಗ್ಗೆ.

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೬೦೪ (೨೯೩೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಈ ವರ್ಷ ಎಷ್ಟು ಹೊಸ ಸರ್ಕಾರಿ ಮೆಡಿಕಲ್ ಕಾಲೇಜುಗಳನ್ನು ಸ್ಥಾಪನೆ ಮಾಡಬೇಕು ಎಂದು ನಿರ್ಣಯಿಸಲಾಗಿದೆ ;

(ಆ) ಯಾವ-ಯಾವ ಸ್ಥಳಗಳಲ್ಲಿ ಪ್ರಾರಂಭಿಸಬೇಕು ಎಂದು ನಿರ್ಧರಿಸಲಾಗಿದೆ ;

(ಇ) ಕಾಲೇಜುಗಳನ್ನು ಸ್ಥಾಪಿಸಲು ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾದ ಒಪ್ಪಿಗೆ ದೊರೆತಿದೆಯೇ ;

(ಈ) ಯಾವ-ಯಾವ ಕಾಲೇಜುಗಳಲ್ಲಿ ಎಷ್ಟು-ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ಸಿಗುವುದು ;

(ಉ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಮೆಡಿಕಲ್ ಕಾಲೇಜುಗಳು ಇರುತ್ತವೆ ; (ವಿವರ ನೀಡುವುದು, ಹಾಗೂ ಪ್ರತಿಯೊಂದು ಯಾವ ಕಾಲೇಜುಗಳಲ್ಲಿ Intake ಇರುವುದು)

(ಊ) ಈಗಿರುವ ಕಾಲೇಜುಗಳಲ್ಲಿ ಬೋಧಕ ಹಾಗೂ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

(ಋ) ಈ ವರ್ಷ ಖಾಸಗಿ ಮೆಡಿಕಲ್ ಕಾಲೇಜುಗಳು ಎಲ್ಲಿ ಪ್ರಾರಂಭವಾಗುತ್ತದೆ (ಖಾಸಗಿ ಸಂಸ್ಥೆಯ ಹೆಸರು ನೀಡತಕ್ಕದ್ದು)

(ಎ) ಖಾಸಗಿ ಮೆಡಿಕಲ್ ಕಾಲೇಜಿನವರು ಎಷ್ಟು ಸೀಟ್‌ಗಳನ್ನು ಬಡ ವಿದ್ಯಾರ್ಥಿಗಳಿಗೆ ಮೀಸಲಿರಿಸಿದ್ದಾರೆ ; ಯಾವ-ಯಾವ ಕಾಲೇಜುಗಳಲ್ಲಿ ಎಷ್ಟು ಸೀಟುಗಳು ಸರ್ಕಾರಕ್ಕೆ ಲಭ್ಯವಿರುತ್ತದೆ ;

(ಏ) ಡೀಮ್ಡ್ ಯೂನಿವರ್ಸಿಟಿಯ ಮೆಡಿಕಲ್ ಕಾಲೇಜುಗಳಲ್ಲಿನ ಯಾವ-ಯಾವ ಕಾಲೇಜುಗಳಲ್ಲಿ ಎಷ್ಟು ಸೀಟ್‌ಗಳು ಸರ್ಕಾರಕ್ಕೆ ಮೀಸಲಿರಿಸಲಾಗಿದೆ ? (ವಿವರ ನೀಡುವುದು)

---

**ಕಲಬುರಗಿಯಲ್ಲಿ ಹೊಸ ಆಸ್ಪತ್ರೆ ಕಾರ್ಯಾರಂಭ**

**ಶ್ರೀ ಅಲ್ಲಮಪ್ರಭು ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೨೬೦೫ (೨೯೪೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿಯಲ್ಲಿ ಈಗಾಗಲೇ ನಿರ್ಮಾಣ ಆಗಿರುವ ಹೊಸ ಜಿಲ್ಲಾ ಆಸ್ಪತ್ರೆ ಯಾವಾಗ ಕಾರ್ಯಾರಂಭವಾಗುತ್ತದೆ ;

(ಆ) ಕಾರ್ಯಾರಂಭ ಮಾಡುವುದು ವಿಳಂಬವಾಗಲು ಕಾರಣಗಳೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ವಿದ್ಯಾರ್ಥಿ ವೇತನದ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೦೬ (೨೯೪೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯುಗಳನ್ನು ದಯುವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನೀಡಿದ ವಿದ್ಯಾರ್ಥಿ ವೇತನ ಎಷ್ಟು ;

(ಆ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಶಾಲೆಗಳ ಸಂಖ್ಯೆ ಎಷ್ಟು ; ಅಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು ;

(ಇ) ಈ ಶಾಲೆಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಆಯುಷ್ಯ ಇಲಾಖೆ ಕುರಿತು.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೦೭ (೨೯೪೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಆಯುಷ್ಯ ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ಈ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಯುನಾನಿ ಚಿಕಿತ್ಸಾಲಯ ನಿರ್ವಹಣೆ, ಔಷಧಿ ಸರಬರಾಜು ಇತ್ಯಾದಿಗಳಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ?

## ಉತ್ತರ ಕರ್ನಾಟಕ ಜಿಲ್ಲೆಯ ಸಾಂಕ್ರಾಮಿಕ ರೋಗ ಪ್ರಯೋಗಾಲಯ ಬಗ್ಗೆ.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೦೮ (೨೯೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕರ್ನಾಟಕ ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗಗಳ ಪತ್ತೆಗೆ ಪ್ರಯೋಗಾಲಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಹಾವು ಮತ್ತು ನಾಯಿ ಕಡಿತಕ್ಕೆ ಔಷಧಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಆದೇಶದ ಪ್ರಕಾರ ಹೊಸ ಹುದ್ದೆಗಳ ನೇಮಕಾತಿ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೦೯ (೩೦೦೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯನ್ನು ದಯವಿಟ್ಟು ತಿಳಿಸುವರೆ :-

೨೦೧೩-೧೪ರ ಆಯವ್ಯಯದಲ್ಲಿ ಘೋಷಿಸಿದಂತೆ, ಹಿಂದುಳಿದ ವರ್ಗಗಳ ಸಮುದಾಯದ ಅಭಿವೃದ್ಧಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಆಡಳಿತ ವ್ಯವಸ್ಥೆಯನ್ನು ಪುನರ್‌ರಚಿಸಿ, ೨೪೮೫ ಹೊಸ ಹುದ್ದೆಗಳನ್ನು ಸೃಜಿಸಿ, ದಿ: ೩೦-೦೯-೨೦೧೩ರಂದು ಸರ್ಕಾರ ಹೊರಡಿಸಿದ ಆದೇಶದ ಪ್ರಕಾರ ಹೊಸ ಹುದ್ದೆಗಳ ನೇಮಕಾತಿಗಾಗಿ ಇಲ್ಲಿಯವರೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಕಳೆದ ಎರಡು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಆಗಿರುವ ಪ್ರಗತಿಯ ವರದಿಯನ್ನು ನೀಡುವುದು)

## ಹೊಸ ನ್ಯಾಯಬೆಲೆ ಅಂಗಡಿಗಳು

**ಶ್ರೀ ಜಿ.ಎಸ್.ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೧೦ (೨೯೫೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಹಾಗೂ ವಿಜಯಪುರ ಅವಳಿ ಜಿಲ್ಲೆಗಳಲ್ಲಿ ಹಂಚಿಕೆ ಮಾಡಲಾದ ಎಲ್ಲಾ ಮಾದರಿಯ ಪಡಿತರ ಚೀಟಿಗಳೆಷ್ಟು ; (ವಿವರ ನೀಡುವುದು)

(ಆ) ನಿಯಮಾನುಸಾರ ಒಂದು ನ್ಯಾಯಬೆಲೆ ಅಂಗಡಿಗೆ ಹಂಚಿಕೆ ಮಾಡಬೇಕಾದ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಇ) ಅವಳಿ ಜಿಲ್ಲೆಗಳಲ್ಲಿ ಪಡಿತರ ಚೀಟಿಗಳ ಸಂಖ್ಯೆಗೆ ಅನುಗುಣವಾಗಿ ನ್ಯಾಯಬೆಲೆ ಅಂಗಡಿಗಳು ಕಾರ್ಯ ನಿರ್ವಹಿಸುತ್ತಿವೆಯೇ ; ಇಲ್ಲದಿದ್ದಲ್ಲಿ ಇನ್ನೂ ಪ್ರಾರಂಭಿಸಬೇಕಾದ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಪಡಿತರ ಚೀಟಿಗಳ ಸಂಖ್ಯೆಗೆ ಅನುಗುಣವಾಗಿ ಹೊಸ ನ್ಯಾಯ ಬೆಲೆ ಅಂಗಡಿಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಬಾಲಕರ ವಸತಿ ನಿಲಯದ ಬಗ್ಗೆ.

**ಶ್ರೀ ಜಿ.ಎಸ್.ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೧೧ (೨೯೫೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು ಇಲ್ಲಿ ಬಾಲಕರ ವಿದ್ಯಾರ್ಥಿಗಳ ವಸತಿ ನಿಲಯಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಬಂದಿದ್ದರೆ, ಬಾಲಕರ ವಿದ್ಯಾರ್ಥಿಗಳ ವಸತಿ ನಿಲಯಕ್ಕೆ ಯಾವ ಕಾಲಮಿತಿಯಲ್ಲಿ ಮಂಜೂರಾತಿ ನೀಡಲಾಗುತ್ತದೆ ;

(ಇ) ೨೦೦೫ನೇ ವರ್ಷದಿಂದ ಇಲ್ಲಿಯವರೆಗೆ ಬಾಲಕರ ವಸತಿ ನಿಲಯಕ್ಕೆ ಕೊಟ್ಟಿರುವ ಬಾಡಿಗೆ ಮೊತ್ತ ಎಷ್ಟು ?

## ಸವಿತಾ ಸಮಾಜ ಅಭಿವೃದ್ಧಿ ನಿಗಮ ಸ್ಥಾಪಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೨೬೧೨ (೨೯೫೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ.) ಹಿಂದುಳಿದ ವರ್ಗದಲ್ಲಿ ಬರುವ ಸವಿತಾ ಸಮಾಜದ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಸರ್ಕಾರ ಯೋಚಿಸಿದೆಯೇ ;

(ಆ) ಈ ಸಮಾಜದಲ್ಲಿ ಬಹಳಷ್ಟು ಹಿಂದುಳಿದ ಅನೇಕ ಉಪ ಪಂಗಡಗಳಿದ್ದು, ಹಲವಾರು ವರ್ಷಗಳಿಂದ ತುಂಬಾ ಹಿಂದುಳಿದ ಈ ಸಮಾಜವನ್ನು ಮೇಲೆತ್ತಲು ನಿಗಮ ಸ್ಥಾಪಿಸುವ ಬೇಡಿಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಸಮಾಜದ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕಾರ್ಯಕ್ರಮಗಳೇನು ;

(ಈ) ನಿರುದ್ಯೋಗಿ ವಿದ್ಯಾವಂತರಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಯಾವ ಕ್ರಮ ಜರುಗಿಸಲಾಗುವುದು ?

## ಯೋಜನಾ ಆಯೋಗದ ಹೊಸ ಸಲಹೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೨೬೧೩ (೨೯೫೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೊಸ ಸರ್ಕಾರದಲ್ಲಿ ಯೋಜನಾ ಆಯೋಗದಿಂದ ಸಾರ್ವಜನಿಕವಾದ ಮಹತ್ವವಾದ ವಿಷಯಗಳಲ್ಲಿ ಸರ್ಕಾರಕ್ಕೆ ನೀಡಿರುವ ಸಲಹೆಗಳಾವುವು ;

(ಆ) ಹಾಗಿದ್ದಲ್ಲಿ ಆ ಸಲಹೆಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ; ಅವುಗಳನ್ನು ಜಾರಿಗೆ ತರಲು ಚಿಂತಿಸಿದೆಯೇ ; ಅವು ಯಾವುವು ? (ವಿವರ ನೀಡುವುದು)

## ತುಮಕೂರು ವೈದ್ಯಕೀಯ ಕಾಲೇಜು ಆರಂಭದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :-**

೨೬೧೪ (೨೯೫೪) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜು ಮಂಜೂರಾಗಿದ್ದು ಯಾವಾಗ ;

(ಆ) ವೈದ್ಯಕೀಯ ಕಾಲೇಜು ನಿರ್ಮಿಸಲು ಗುರುತಿಸಿರುವ ಜಾಗ ಯಾವುದು ; ಒಟ್ಟು ವಿಸ್ತೀರ್ಣ ಎಷ್ಟು ;

(ಇ) ಯಾವಾಗಿನಿಂದ ಪ್ರಾರಂಭಿಸಲಾಗುವುದು ?

## ಪ.ಜಾ ಮತ್ತು ಪ.ಪಂಗಡದವರಿಗೆ ಮೀಸಲಿಟ್ಟ ಅನುದಾನ ದುರುಪಯೋಗವಾಗುತ್ತಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೧೫ (೨೯೬೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾಗಿರುವ ವಿಶೇಷ ಘಟಕ ಯೋಜನೆ SCP-STP ಯನ್ನು

ವಿವಿಧ ಇಲಾಖೆಗಳ ಮೂಲಕ ಬಳಸಲು ಇರುವ ಮಾನದಂಡಗಳೇನು ; (ಮಾನದಂಡದ ಪ್ರತಿಯನ್ನು ಇಲಾಖಾವಾರು ಒದಗಿಸುವುದು)

(ಆ) ಇಂತಹ ವಿಶೇಷ ಘಟಕ ಯೋಜನೆ ಎಸ್.ಸಿ.ಪಿ ಮತ್ತು ಎಸ್.ಟಿ.ಪಿ.ಯ ಉದ್ದೇಶವನ್ನು ಉಲ್ಲಂಘಿಸಿ ಸ್ವೇಚ್ಛಾಚಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮಗಳೇನು ; ತೆಗೆದುಕೊಳ್ಳುವ ಶಿಸ್ತು ಕ್ರಮಗಳೇನು ;

(ಇ) ಉಡುಪಿ ಜಿಲ್ಲೆಯಲ್ಲಿ ಕರ್ನಾಟಕ ನೀರಾವರಿ ನಿಗ್ರಮದಿಂದ ವರಾಹಿ ನೀರಾವರಿ ಯೋಜನೆಯಡಿ ಎಸ್.ಸಿ.ಪಿ. ಮತ್ತು ಎಸ್.ಟಿ.ಪಿ. ಯೋಜನೆಯಡಿ ದಿನಾಂಕ:೦೬.೦೬.೨೦೧೪, ೨೩.೦೬.೨೦೧೪ ಮತ್ತು ೦೮.೧೨.೨೦೧೪ ರಂದು ಟೆಂಡರ್ ಕರೆಯಲಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಒಂದೂ ಮನೆಗಳು ಇಲ್ಲದೆ ಇರುವಲ್ಲಿ ರಸ್ತೆಗಳಿಗೆ ಕಾಂಕ್ರೀಟ್‌ಕರಣ ಕಾಮಗಾರಿ ಮಾಡಿರುವುದು ಸರ್ಕಾರ ಗಮನಿಸಿದೆಯೇ ; ಈ ರೀತಿ ಅಧಿಕಾರ ದುರುಪಯೋಗ ಮಾಡಿದ ಅಧಿಕಾರಿಯ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

# ಉಡುಪಿ ಜಿಲ್ಲೆಯಲ್ಲಿ ಸಂಸದರ ಮತ್ತು ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಪಡೆದ ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ಟ್ರಸ್ಟ್‌ಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೧೬(೪೯೬೭)ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿ ಸಂಸದರ ಮತ್ತು ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಡಿಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ನೀಡಲಾದ ಅನುದಾನವೆಷ್ಟು ; ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡಿದ ಸಂಸದರು ಮತ್ತು ಶಾಸಕರುಗಳು ಯಾರು ; (ವರ್ಷಾವಾರು, ಶಿಕ್ಷಣ ಸಂಸ್ಥೆವಾರು, ಅನುದಾನದ ಮೊತ್ತವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಸಂಸದರ ಮತ್ತು ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಡಿಯಲ್ಲಿ ಟ್ರಸ್ಟ್‌ಗಳಿಗೆ ನೀಡಲಾದ ಅನುದಾನವೆಷ್ಟು ; ಟ್ರಸ್ಟ್‌ಗಳಿಗೆ ಅನುದಾನ ನೀಡಿದ ಸಂಸದರ ಮತ್ತು ಶಾಸಕರುಗಳು ಯಾರು ? (ವರ್ಷವಾರು, ಟ್ರಸ್ಟ್‌ವಾರು, ಅನುದಾನದ ಮೊತ್ತವಾರು ವಿವರ ನೀಡುವುದು)

# ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹೊಣೆ ಹಾಗೂ ಸೇವೆಗಳ ಕುರಿತು ಮತ್ತು ಬೆಳ್ವೆ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ಕಾಮಗಾರಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೧೭ (೨೯೬೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ನಿರ್ವಹಿಸಬೇಕಾದ ಹೊಣೆ ಮತ್ತು ಸೇವೆಗಳು ಯಾವುವು ;

(ಆ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಬೆಳ್ವೆ ಪ್ರಾಥಮಿಕ ಆರೋಗ್ಯ ಕೇಂದ್ರವು ಇರುವ ಸ್ಥಳದ ಒಟ್ಟು ವಿಸ್ತೀರ್ಣವೆಷ್ಟು ; ಈ ಪ್ರಾಥಮಿಕ ಆರೋಗ್ಯ ಕೇಂದ್ರದ ಜಾಗವು ಅತಿಕ್ರಮವಾಗದಂತೆ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಬೆಳ್ವೆ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ಕಾಮಗಾರಿಯನ್ನು ಎಂದು ಪ್ರಾರಂಭಿಸಲಾಯಿತು ; ಈ ಕಾಮಗಾರಿಯ ಅಂದಾಜು ಮೊತ್ತವೆಷ್ಟು ; ಈ ಕಾಮಗಾರಿಗೆ ಈ ತನಕ ವೆಚ್ಚವಾಗಿರುವ ಮೊತ್ತವೆಷ್ಟು ; ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ಕಾಮಗಾರಿಯನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರ ಹೆಸರು ಮತ್ತು ವಿಳಾಸದೊಂದಿಗೆ ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿರುವ ರಸ್ತೆಗಳ ಧಾರಣ ಸಾಮರ್ಥ್ಯದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೭೮ (೨೯೬೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿರುವ ರಸ್ತೆಗಳ ಧಾರಣಾ ಸಾಮರ್ಥ್ಯ ವೆಚ್ಚವೆಷ್ಟು; ಮತ್ತು ರಸ್ತೆಗಳ ಧಾರಣಾ ಸಾಮರ್ಥ್ಯಕ್ಕೆ ಅನುಗುಣವಾಗಿ ಅಧಿಕ ಭಾರದ ಸರಕು ಸಾಗಣೆ ಲಾರಿಗಳಿಗೆ ಪರವಾನಗಿ ನೀಡಲಾಗುತ್ತಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಆ) ಶಿರಡಿ ಘಾಟ್ ಮಾರ್ಗದಲ್ಲಿ ವಾಹನ ಸಂಚಾರವನ್ನು ನಿರ್ಬಂಧಿಸಿರುವುದರಿಂದ ಅಧಿಕ ಭಾರದ ವಾಹನಗಳು ಉಡುಪಿ ಜಿಲ್ಲೆಯ ರಸ್ತೆಗಳಲ್ಲಿ ಯದ್ವಾತದ್ವಾ ಸಂಚರಿಸುತ್ತಿರುವುದರಿಂದ ರಸ್ತೆಗಳು ಸಂಪೂರ್ಣ ಹದಗೆಡುತ್ತಿರುವುದು ಹಾಗೂ ಅಪಘಾತಗಳು ಹೆಚ್ಚಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ಇದನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ವಿವಿಧ ಇಲಾಖೆಗಳ ಸುತ್ತೋಲೆ ಮತ್ತು ನಿಯಮಗಳನ್ನು ವೆಬ್‌ಸೈಟ್‌ಗೆ ಹಾಕಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೭೯(೨೯೬೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವಿವಿಧ ಇಲಾಖೆಗಳ ಸುತ್ತೋಲೆ ಮತ್ತು ನಿಯಮಗಳನ್ನು ತಮ್ಮ ಇಲಾಖಾ ವೆಬ್‌ಸೈಟ್‌ನಲ್ಲಿ ಹಾಕುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ ಕಾರಣವೇನು ;

(ಆ) ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳ ಸಭಾನಡವಳಿ ಮತ್ತು ನಿರ್ಣಯಗಳನ್ನು ಆಯಾ ಸ್ಥಳೀಯ ಸಂಸ್ಥೆಗಳ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ವಿಧಾನ ಮಂಡಲ ಪ್ರಚುರಪಡಿಸಲು ಸಾಧ್ಯವಿರುವ ಸಭಾ ನಡವಳಿಗಳನ್ನು ವೆಬ್‌ಸೈಟ್‌ನಲ್ಲಿ ಹಾಕುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಈ) ರಾಜ್ಯದ ರಾಜಧಾನಿಯಲ್ಲಿ ಕಾರ್ಯರೂಪಕ್ಕೆ ತರಲಾಗದ ಮಾಹಿತಿ ತಂತ್ರಜ್ಞಾನವನ್ನು ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ನಿರೀಕ್ಷಿಸಲು ಸಾಧ್ಯವೇ; ಇದನ್ನು ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದು ?

## ಕರ್ನಾಟಕ ವೈದ್ಯ ವಿಜ್ಞಾನ ಸಂಸ್ಥೆಯ ನಿರ್ದೇಶಕರ ಹುದ್ದೆ.

**ಪ್ರೊ. ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :-**

೨೬೨೦ (೨೯೮೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವೈದ್ಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಹುದ್ದೆಗೆ ನೇಮಕಗೊಳ್ಳಲು ಕನಿಷ್ಠ ೫ ವರ್ಷಗಳ ಪ್ರಾಧ್ಯಾಪಕ ವೃತ್ತಿಯ ಅನುಭವ ಇರಬೇಕು ಎಂಬ ನಿಯಮವಿದ್ದರೂ ಆ ಅರ್ಹತೆಯನ್ನು ಪೂರ್ಣಗೊಳಿಸದ ಯಾರನ್ನು ನಿರ್ದೇಶಕರ ಹುದ್ದೆಗೆ ನೇಮಕ ಮಾಡಲಾಗಿದೆ ;

(ಆ) ಅರ್ಹತೆಯು ನಿಬಂಧನೆಯುನ್ನು ಪೂರ್ಣಗೊಳಿಸದ ಸದರಿಯವರನ್ನು ನೇಮಿಸಲು ಕಾರಣವೇನು ;

(ಇ) ಸರ್ಕಾರದ ಸೇವಾ ನಿಯಮಕ್ಕೆ ವಿರುದ್ಧವಾಗಿ ಸದರಿಯವರು ಯುನೈಟೆಡ್ ನೇಷನ್ಸ್ ಡೆವೆಲಪ್‌ಮೆಂಟ್ ಪ್ರೋಗ್ರಾಮ್‌ಗೆ ಸಲಹೆಗಾರರಾಗಿ, ಕೆಲಸ ಮಾಡಿದ್ದಾರೆ ಎನ್ನುವುದು ನಿಜವೇ ?

## ವೈದ್ಯಕೀಯ ಕಾಲೇಜುಗಳಿಗೆ ಅನುಮತಿ ನಿರಾಕರಿಸಿರುವ ಕುರಿತು

**ಪ್ರೊ. ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :–**

೨೬೨೧ (೨೯೭೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬರುವ ಶೈಕ್ಷಣಿಕ ವರ್ಷ ಪ್ರಾರಂಭಿಸ ಬೇಕೆಂದು ನಿರ್ಧರಿಸಲಾಗಿದ್ದ ವೈದ್ಯಕೀಯ ಕಾಲೇಜುಗಳ ಆರಂಭಕ್ಕೆ ಭಾರತದ ವೈದ್ಯಕೀಯ ಶಿಕ್ಷಣ ಮಂಡಳಿ ಅನುಮತಿ ನಿರಾಕರಿಸಿದೆ ಎನ್ನುವುದು ನಿಜವೇ ;

(ಆ) ಈ ಕಾಲೇಜುಗಳ ಪ್ರಾರಂಭಕ್ಕೆ ಅಗತ್ಯವಾದ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ ;

(ಇ) ಹೊಸ ವೈದ್ಯಕೀಯ ಕಾಲೇಜುಗಳ ಆರಂಭಕ್ಕೆ ಅನುಮತಿ ನೀಡದಿರುವಂತೆ ವೈದ್ಯಕೀಯ ಶಿಕ್ಷಣ ಮಂಡಳಿಯು ಭಾರತ ಸರ್ಕಾರಕ್ಕೆ ವಿನಂತಿಸಿದೆ ಎನ್ನುವುದು ನಿಜವೇ ;

(ಈ) ಕಲಬುರಗಿ ಮತ್ತು ಗದಗ ಜಿಲ್ಲೆಗಳಲ್ಲಿ ಈ ವರ್ಷದಿಂದಲೇ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸಿದ್ಧತೆಗಳನ್ನು ಪೂರೈಸಲಾಗುವುದೆಂದು ಮಾನ್ಯ ಸಚಿವರು ಹೇಳಿರುವುದು

ವರದಿಯಾಗಿದೆ, ಈ ಮೇಲಿನ ಕಾಲೇಜುಗಳನ್ನು ಬರುವ ಶೈಕ್ಷಣಿಕ ವರ್ಷದಿಂದ ಆರಂಭಿಸಲು ಏನು ಕ್ರಮ ಕೈಗೊಳ್ಳಲಾಗಿದೆ ;

(ಉ) ಉಳಿದ ಕಾಲೇಜುಗಳನ್ನು ಯಾವಾಗ ಆರಂಭಿಸಲಾಗುವುದು ?

## ಉನ್ನತ ಶಿಕ್ಷಣದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ವಿದ್ಯಾರ್ಥಿಗಳ ಕಂಪ್ಯೂಟರ್ ಒದಗಿಸುವ ಬಗ್ಗೆ.

**ಪ್ರೊ. ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :-**

೨೬೨೨ (೨೯೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಬಾರಿಯ ಆಯವ್ಯಯ ಪತ್ರದಲ್ಲಿ ಘೋಷಿಸಲಾದಂತೆ ಉನ್ನತ ಶಿಕ್ಷಣದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಕಂಪ್ಯೂಟರ್‌ಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಆ) ಇದುವರೆಗೆ ಎಷ್ಟು ಕಂಪ್ಯೂಟರ್‌ಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು ಪಟ್ಟಿ ನೀಡುವುದು)

(ಇ) ಕಂಪ್ಯೂಟರ್ ವಿತರಣೆಗಾಗಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗುತ್ತಿರುವ ವಿಧಾನಗಳೇನು ;

(ಈ) ಇದುವರೆಗೆ ಯಾವುದೇ ಕಂಪ್ಯೂಟರ್‌ಗಳನ್ನು ವಿತರಿಸದಿದ್ದಲ್ಲಿ ಯಾವಾಗ ವಿತರಿಸಲಾಗುವುದು ?

## ವೈದ್ಯಕೀಯ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳ ಕುರಿತು

**ಪ್ರೊ. ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :-**

೨೬೨೩ (೨೯೮೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿಯ ಕೊರತೆ ಗಣನೀಯ ಪ್ರಮಾಣದಲ್ಲಿದ್ದು ಕಾಲೇಜುಗಳ ಕಾರ್ಯನಿರ್ವಹಣೆಯ ಮೇಲೆ ಗಂಭೀರ ನಿಷೇಧಾತ್ಮಕ ಪರಿಣಾಮ ಬಿರುತ್ತಿದೆ ಎನ್ನುವುದು ನಿಜವೇ ;

(ಆ) ವಿಭಿನ್ನ ಸರ್ಕಾರಿ ಕಾಲೇಜುಗಳಲ್ಲಿ ಅಗತ್ಯವಿರುವ ವೈದ್ಯಕೀಯ ಸಿಬ್ಬಂದಿಯ ಸಂಖ್ಯೆ ಎಷ್ಟು, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸಿಬ್ಬಂದಿಯ ಕೊರತೆಯನ್ನು ನಿವಾರಿಸಿ, ಅಗತ್ಯವಾದ ಸಂಖ್ಯೆಯಲ್ಲಿ ಸಿಬ್ಬಂದಿಯನ್ನು ನೇಮಕ ಮಾಡುವ ನಿಟ್ಟಿನಲ್ಲಿ ಸರ್ಕಾರ ನಿರ್ದಿಷ್ಟ ಕಾಲಮಿತಿಯ ಒಳಗೆ ಕ್ರಮ ಕೈಗೊಳ್ಳುವುದೇ ?

## ಖಾಸಗಿ ಮತ್ತು ಸರ್ಕಾರಿ ಕಟ್ಟಡಗಳ ಮೇಲೆ ನಿರ್ಮಿಸಿರುವ ಟಿ.ವಿ. ಟವರ್‌ಗಳ ಹಾನಿ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೨೪ (೨೯೭೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾಸಗೀ ಕಟ್ಟಡಗಳ ಮೇಲೆ ಟಿ.ವಿ. ಟವರ್‌ಗಳನ್ನು ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಂತಹ ಟವರ್‌ಗಳಿಂದ ಅಲ್ಲಿ ವಾಸಿಸುವ ಸುತ್ತ ಮುತ್ತ ಸಾರ್ವಜನಿಕರ ಆರೋಗ್ಯಕ್ಕೆ ಹಾನಿಕರ ಎಂಬುದನ್ನು ಸರ್ಕಾರ ಗಮನಿಸಿದೆಯೇ;

(ಇ) ಅಂತಹ ಟವರ್‌ಗಳನ್ನು ಸ್ಥಾಪಿಸಲು ಬಿಬಿಎಂಪಿ ಲೈಸನ್ಸ್ ನೀಡಿದೆಯೇ ;

(ಈ) ಸಾರ್ವಜನಿಕರ ಆರೋಗ್ಯ ದೃಷ್ಟಿಯಿಂದ ಅಂತಹ ಟವರ್‌ಗಳನ್ನು ತೆರವುಗೊಳಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ; ಹಾಗಿದ್ದರೆ, ಎಷ್ಟು ದಿನಗಳಲ್ಲಿ ಕಾರ್ಯಗತ ಮಾಡಲಾಗುವುದು ?

## ಮೈಸೂರು ಚಾಮರಾಜನಗರ ಜಿಲ್ಲೆಗಳಲ್ಲಿ ಸಾರಿಗೆ ಸಂಸ್ಥೆ ಡಿಪೋಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೨೫ (೨೯೭೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ೨೦೧೪-೧೫ನೇ ಸಾಲಿಗೆ ಎಷ್ಟು ಹೊಸ ಬಸ್‌ಗಳನ್ನು ಸಾರಿಗೆ ಸಂಸ್ಥೆಯ ಡಿಪೋಗಳಿಗೆ ಸೇರ್ಪಡೆ ಮಾಡಲಾಗಿದೆ ; (ಪ್ರತಿಯೊಂದು ಡಿಪೋಗಳ ವಿವರ ನೀಡುವುದು)

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ೨೦೧೪-೧೫ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ರಾಜ್ಯ ರಸ್ತೆ

ಸಾರಿಗೆ ಸಂಸ್ಥೆ ಬಸ್‌ನಿಲ್ದಾಣ ಮತ್ತು ಹೊಸ ಬಸ್ ಡಿಪೋಗಳನ್ನು ಸ್ಥಾಪನೆ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ ?

## ಮೈಸೂರು ಚಾಮರಾಜನಗರ ಜಿಲ್ಲೆಗಳಲ್ಲಿ ಹೆಚ್‌ಐವಿ ಪ್ರಕರಣಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೨೯ (೨೯೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಕಳೆದ ಮೂರು ತಿಂಗಳಿನಿಂದ ಹೆಚ್‌ಐವಿ ರೋಗದಿಂದ ಸಾವನ್ನಪ್ಪಿದವರು, ಶಂಕಿತ ಸೋಂಕಿನಿಂದ ಬಳಲುತ್ತಿರುವ ರೋಗಿಗಳ ಸಂಖ್ಯೆ ಎಷ್ಟು ; (ಮೈಸೂರು ನಗರ, ಚಾಮರಾಜನಗರ ನಗರ ಪ್ರದೇಶ ಮತ್ತು ಎರಡೂ ಜಿಲ್ಲೆಗಳ ತಾಲ್ಲೂಕುವಾರು ವಿವರ ನೀಡುವುದು)

(ಆ) ಎರಡೂ ಜಿಲ್ಲೆಗಳ ನಗರ ಪ್ರದೇಶ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಹೆಚ್‌ಐವಿ ರೋಗದ ಹರಡುವಿಕೆಯನ್ನು ತಡೆಗಟ್ಟಲು ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಮತ್ತು ರೋಗಿಗಳ ಇಲಾಖೆಗೆ ಸೂಕ್ತ ಔಷಧೋಪಚಾರ ವ್ಯವಸ್ಥೆಯನ್ನು ಮಾಡಲಾಗಿದೆಯೇ ? (ವಿವರ ಒದಗಿಸುವುದು)

## ರಾಜ್ಯದಲ್ಲಿ ತ್ರಿಚಕ್ರ (ಟಂಟಂ) ವಾಹನಗಳ ಬಗ್ಗೆ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೨೭ (೭೯೭೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತ್ರಿಚಕ್ರದ ವಾಹನಗಳಲ್ಲಿ (ಟಂಟಂ) ಸರಕು ಸಾಗಾಣಿಕೆ ಮಾಡುವುದಕ್ಕೆ ಸರ್ಕಾರದಿಂದ ಎಷ್ಟು ವಾಹನಗಳಿಗೆ ಪರಿವಾನಿಗೆ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಹಳ್ಳಿಯ ಜನ ಸಾಮಾನ್ಯರು ಪ್ರಯಾಣ ಬೆಳೆಸುವ ಮೂರು ಚಕ್ರದ ವಾಹನಗಳಿಗೆ (ಟಂಟಂ) ಸರ್ಕಾರದಿಂದ ಎಷ್ಟು ವಾಹನಗಳಿಗೆ ಪರವಾನಿಗೆ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ವಾಹನಗಳ ಮಾಲೀಕರು ತಮ್ಮ ಲಾಭಕ್ಕಾಗಿ ಹೆಚ್ಚಿನ ಪ್ರಯಾಣಿಕರುಗಳನ್ನು ಸಾಗಿಸುವುದರಿಂದ ಅಪಘಾತವಾಗುತ್ತಿದ್ದು, ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಾವಿಗಿಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಮತ್ತು ಇದನ್ನು ನಿಯಂತ್ರಿಸಲು ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು ?

## ಸರ್ಕಾರಿ ಯೋಜನೆಗಳ ದುರುಪಯೋಗ ತಡೆ.

**ಶ್ರೀ ಎ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೨೮(೨೯೮೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯ ಆಹಾರ ಪದಾರ್ಥಗಳನ್ನು ಕಾಳಸಂತೆಯಲ್ಲಿ ಅಕ್ರಮವಾಗಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ, ಒಟ್ಟು ಎಷ್ಟು ಪ್ರಮಾಣದ ಆಹಾರ ಪದಾರ್ಥಗಳನ್ನು (ಅಕ್ಕಿ/ ಇತರೇ ಪಡಿತರ) ವಶಪಡಿಸಿಕೊಳ್ಳಲಾಗಿದೆ ; ಎಷ್ಟು ಜನರನ್ನು ಶಿಕ್ಷೆಗೊಳಪಡಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಅನ್ನಭಾಗ್ಯ ಯೋಜನೆಯನ್ನು ಹೊರತುಪಡಿಸಿ ಇನ್ಯಾವ ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆ, ಈ ಯೋಜನೆಗೆ ರಾಜ್ಯ ಸರ್ಕಾರದಿಂದ ಮೀಸಲಿಟ್ಟಿರುವ ಅನುದಾನ ಎಷ್ಟು ; ಸದರಿ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರದ ಬೊಕ್ಕಸಕ್ಕೆ ಆಗುವ ವೆಚ್ಚವೆಷ್ಟು, ಈ ಎಲ್ಲಾ ಯೋಜನೆಗಳಿಗೆ ಕೇಂದ್ರ ಸರ್ಕಾರದಿಂದ ಅನುದಾನ ಪಡೆಯಲಾಗಿದೆಯೆ ; (ಪಡೆಯದಿದ್ದಲ್ಲಿ ವಿವರ ನೀಡುವುದು)

(ಇ) ಅನ್ನಭಾಗ್ಯ ಯೋಜನೆಯನ್ನು ಹೊರತುಪಡಿಸಿ ಇನ್ನಾವುದೇ ಹೊಸ ಯೊಜನೆಗಳನ್ನು ಸರ್ಕಾರ ಕೈಗೆತ್ತಿಕೊಳ್ಳಲಿದೆಯೇ ; ಪಡಿತರ ಚೀಟಿ ಮತ್ತು ಪಡಿತರ ನೀಡುವಲ್ಲಿ ನಡೆಯುವ ಅಕ್ರಮಗಳಿಗೆ ತಡೆಯೊಡ್ಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಸ್ ಶೆಲ್ಟರ್ ಸ್ಥಾಪನೆ.

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೨೯ (೨೯೮೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ನಗರದಲ್ಲಿ ನಗರ ಸಾರಿಗೆ ಬಸ್ ಶೆಲ್ಟರ್‌ಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಬಸ್ ಶೆಲ್ಟರ್ ನಿರ್ಮಾಣಕ್ಕೆ ಮಂಜೂರಾತಿ ನೀಡುವ ಪ್ರಸ್ತಾಪ ಯಾವ ಹಂತದಲ್ಲಿದೆ ;

(ಇ) ಹಾಗಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗುವುದು ? (ಪೂರ್ಣ ವಿವರ ಒದಗಿಸುವುದು)

## ಬಸ್‌ಗಳಲ್ಲಿ ಎ.ಸಿ. ಅಳವಡಿಸುವ ಬಗ್ಗೆ.

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೩೦ (೨೯೯೦) ಮಾನ್ಯ ಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ರಾಯಚೂರು ಜಿಲ್ಲೆಯಲ್ಲಿ ಅತಿಯಾದ ಬಿಸಿಲಿನಿಂದ ಪ್ರಯಾಣಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಪ್ರಯಾಣಿಕರ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಅತಿ ಹೆಚ್ಚು ಬಿಸಿಲಿರುವುದರಿಂದ ತಾಲ್ಲೂಕು ಕೇಂದ್ರಗಳಲ್ಲಿ ಸಂಚರಿಸುವ

ಬಸ್ಸುಗಳಿಗೆ ಎ.ಸಿ ಅಳವಡಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ? (ಪೂರ್ಣ ವಿವರ ಒದಗಿಸುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಹುದ್ದೆಗಳು.

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೩೧ (೨೯೯೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ರಾಯಚೂರು ಜಿಲ್ಲೆಯ ತಾಲ್ಲೂಕು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳ ನೇಮಕಾತಿಗಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಹಾಗೂ ೨೦೧೫-೧೬ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಪಿ.ಹೆಚ್.ಸಿ ಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಎಲ್ಲೆಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ ? (ಪೂರ್ಣ ವಿವರ ಒದಗಿಸುವುದು)

## ಹೆಚ್1 ಎನ್1 ರೋಗ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೨೬೩೨ (೩೦೦೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಹೆಚ್1 ಎನ್1 ಪೀಡಿತರು ಯಾವ ಯಾವ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ; ಅವರಿಗಾಗಿ

ಯಾವ ಯಾವ ವಿಶೇಷ ವ್ಯವಸ್ಥೆಯನ್ನು ಮಾಡಲಾಗಿದೆ ; (ಮೃತರು ಹಾಗೂ ರೋಗಿಗಳ ಜಿಲ್ಲಾವಾರು ವಿವರ ನೀಡುವುದು ;

(ಆ) ಶಂಕಿತ ರೋಗಿಗಳ ರಕ್ತ ಪರೀಕ್ಷೆ ಮುಂತಾದ ಪರೀಕ್ಷೆಗಳಿಗೆ ರಾಜ್ಯದ ಯಾವ ಯಾವ ಆಸ್ಪತ್ರೆಗಳಲ್ಲಿ ವ್ಯವಸ್ಥೆ ಮಾಡಲಾಗಿದೆ ? (ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ತಪಾಸಣೆಗಾಗಿ ತಗಲುವ ಖರ್ಚು ಮತ್ತು ಶುಲ್ಕಗಳ ವಿವರ ನೀಡುವುದು)

## ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಹೊರಗುತ್ತಿಗೆ ನೌಕರರು.

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೨೬೩೩ (೨೯೮೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ: ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಅವಶ್ಯಕತೆಗಿಂತ ಹೆಚ್ಚಿನ ಹೊರಗುತ್ತಿಗೆ (Outsources) ನೌಕರರನ್ನು ನೇಮಿಸಿಕೊಂಡಿರುವ ಬಗ್ಗೆ ಆಂತರಿಕ ಲೆಕ್ಕ ಪರಿಶೋಧನಾ ವರದಿಯಲ್ಲಿ ಆಕ್ಷೇಪಣೆ ವ್ಯಕ್ತಪಡಿಸಿರುವುದು ನಿಜವೇ ; ಇದ್ದಲ್ಲಿ, ಕಡಿತಗೊಳಿಸಲು ಈಗಾಗಲೇ ಕೈಗೊಂಡಿರುವ ಕ್ರಮಗಳೇನು ;

(ಆ) ನಿಗಮದಲ್ಲಿಯೇ ಕೆಲಸ ಮಾಡಿಕೊಂಡು ಖೊಟ್ಟಿ ಆದಾಯ ಪ್ರಮಾಣ ಪತ್ರ ನೀಡಿ ಸಾಲ–ಸೌಲಭ್ಯ ಪಡೆದಿರುವ ಹೊರಗುತ್ತಿಗೆ ನೌಕರರ ವಿರುದ್ಧ ಈಗಾಗಲೇ ಕೈಗೊಂಡಿರುವ ಕ್ರಮಗಳೇನು ;

(ಇ) ಸತ್ಯಕ್ಕೆ ದೂರವಾದ ಮಾಹಿತಿಗಳನ್ನು ನೀಡಿ ನಿಗಮಕ್ಕೆ ವಂಚಿಸಿರುವ ಹೊರಗುತ್ತಿಗೆ ನೌಕರರನ್ನು ನಿಗಮದಿಂದ ಕೈಬಿಟ್ಟು ಅವಶ್ಯಕತೆಯಿದ್ದರೆ ಅವರ ಸ್ಥಾನದಲ್ಲಿ ಇತರ ನಿರುದ್ಯೋಗಿ ಯುವಕರಿಗೆ ಅವಕಾಶ ಮಾಡಿಕೊಡಲಾಗುವುದೇ ;

(ಈ) ಇನ್ನು ಮುಂದೆ ಇಂತಹವುಗಳು ಪುನರಾವರ್ತನೆಯಾಗದಂತೆ ಈಗಾಗಲೇ ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳೇನು ?

## ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮದ ದಿನಗೂಲಿ ನೌಕರರ ಸೌಲಭ್ಯಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೨೬೩೪ (೨೯೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೧೯೯೨ನೇ ಸಾಲಿನಿಂದ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿ/ಜಿಲ್ಲಾ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ/ನಿಗದಿತ ವೇತನದ ನೌಕರರ ಸಂಖ್ಯೆ ಎಷ್ಟು ; (ಹೆಸರು, ಹುದ್ದೆ, ಕೆಲಸಕ್ಕೆ ಸೇರಿದ ದಿನಾಂಕ ಮತ್ತು ವಿದ್ಯಾರ್ಹತೆ ಸಹಿತ ವಿವರ ನೀಡುವುದು)

(ಆ) ೧೯೯೨ನೇ ಸಾಲಿನಿಂದ ಈ ದಿನಾಂಕದವರೆಗೆ ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಈ ನೌಕರರ ವಿಷಯ ಕುರಿತು ಮಂಡಿಸಿದ ವಿಷಯ ಹಾಗೂ ಸಭೆಯಲ್ಲಿ ಕೈಗೊಂಡ ನಿರ್ಣಯ/ ತೀರ್ಮಾನದಂತೆ ಕ್ರಮ ವಹಿಸಲಾಗಿದೆಯೇ ; ವಹಿಸಿದ್ದಲ್ಲಿ, ಅದರ

ಪ್ರತಿ ಹಾಗೂ ನಡವಳಿಗಳ (Proceedings) ಪ್ರತಿ ಒದಗಿಸುವುದು ; ಕ್ರಮ ವಹಿಸದಿದ್ದಲ್ಲಿ, ಸಕಾರಣ ತಿಳಿಸುವುದು ಹಾಗೂ ಇವರಿಗೆ ನೀಡುತ್ತಿರುವ ಇನ್ನಿತರೇ ಸೌಲಭ್ಯಗಳಾವುವು ;

(ಇ) ಈ ನೌಕರರಿಗೆ ಇ.ಪಿ.ಎಫ್. ಸೌಲಭ್ಯವಿದೆಯೇ; (ಇದ್ದಲ್ಲಿ ಕೆಲಸಕ್ಕೆ ಸೇರಿದ ದಿನಾಂಕದಿಂದ ಇಲ್ಲಿವರೆವಿಗೂ ತಿಂಗಳವಾರು ಕಡಿತಗೊಳಿಸುತ್ತಿರುವ ಮೊತ್ತ ಹಾಗೂ ನಿಗಮದ ಪಾಲನ್ನು ಒಳಗೊಂಡಂತೆ ಸ್ಟೇಟ್‌ಮೆಂಟ್‌ನ್ನು ಪ್ರತಿ ನೌಕರವಾರು ನೀಡುವುದು)

(ಈ) ನಿಗಮದ ಖಾಯಂ ನೌಕರರಿಗೆ ಪ್ರತಿ ಮಾಹೆ ಸಂಬಳದ ಚೀಟಿಯನ್ನು (Pay slip) ನೀಡುತ್ತಿರುವಂತೆ ಇವರುಗಳಿಗೆ ಸಂಬಳದ ಚೀಟಿಯನ್ನು ನೀಡಲಾಗುತ್ತಿದೆಯೇ ; (ಇದ್ದಲ್ಲಿ ಅದರ ಪ್ರತಿ ನೀಡುವುದು) ಇಲ್ಲದಿದ್ದಲ್ಲಿ, ಏಕೆ ವಿತರಿಸುತ್ತಿಲ್ಲ ; ಇದಕ್ಕೆ ಕಾನೂನಿನ ತೊಡಕಿದೆಯೇ ; ಇನ್ನು ಮುಂದಾದರೂ ವಿತರಿಸಲಾಗುವುದೇ ;

(ಉ) ಬೇರೆ ಇಲಾಖೆಗಳಲ್ಲಿ ದಿನಗೂಲಿ/ನಿಗದಿತ ಖಾಯಂಗೊಳಿಸಿದಂತೆ ನಿಗಮದಲ್ಲಿ ಖಾಯಂಗೊಳಿಸಿರುವ ನೌಕರರ ಸಂಖ್ಯೆ ಎಷ್ಟು; ಹೆಸರು, ಕೆಲಸಕ್ಕೆ ಸೇರಿದ ದಿನಾಂಕ ಮತ್ತು ಖಾಯಂಗೊಂಡ ದಿನಾಂಕವಾರು ವಿವರ ನೀಡುವುದು ; ಇಲ್ಲದಿದ್ದಲ್ಲಿ, ಕಾರಣವೇನು ? (ವಿವರ ನೀಡುವುದು)

# ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ದಿನಗೂಲಿ ನೌಕರರ ಖಾಯಂ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೨೬೩೫ (೨೯೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಸರ್ಕಾರದ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ ೨೦೧೨ರನ್ವಯ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ದಿನಗೂಲಿ/ನಿಗದಿತ ವೇತನ ಪಡೆಯುತ್ತಿರುವ ನೌಕರರು ಎಷ್ಟು ;

(ಆ) ೧೦ನೇ ಏಪ್ರಿಲ್ ೨೦೦೬ ಕ್ಕೆ ೧೦ ವರ್ಷಗಳಿಗೂ ಕಡಿಮೆ ಇರದಂತೆ ಕಾರ್ಯ ನಿರ್ವಹಿಸಿ ಸೇವೆ ಪೂರ್ಣಗೊಳಿಸಿರುವ ನೌಕರರು ಎಷ್ಟು ಜನ (ಅವರು ಹೆಸರು, ಹುದ್ದೆ, ಕೆಲಸಕ್ಕೆ ಸೇರಿದ ದಿನಾಂಕವಾರು ಮಾಹಿತಿ ನೀಡುವುದು)

(ಇ) ಈ ನೌಕರರನ್ನು ಖಾಯಂಗೊಳಿಸುವ ಬಗ್ಗೆ ಗೆಜೆಟ್ ಹೊರಡಿಸಲು ಕಾಲಾವಕಾಶ ನಿಗದಿಪಡಿಸಿ ಸರ್ಕಾರವು ಎಲ್ಲಾ ಇಲಾಖೆಗಳಿಗೆ/ ಮುಖ್ಯಸ್ಥರಿಗೆ ನಿರ್ದೇಶನ ನೀಡಲಾಗಿದೆಯೇ ; ಇದ್ದಲ್ಲಿ ಆದೇಶದ ಪ್ರತಿ ನೀಡುವುದು ;

(ಈ) ಸದರಿ ಆದೇಶದಂತೆ ಈ ನೌಕರರನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರದಿಂದ ಗೆಜೆಟ್ ಹೊರಡಿಸಲು ಸರ್ಕಾರಕ್ಕೆ ಮಾಹಿತಿ ಸಲ್ಲಿಸಲಾಗಿದೆಯೇ ; ಮಾಹಿತಿ ಸಲ್ಲಿಸಿದ್ದಲ್ಲಿ, ನಿಗಧಿತ ಸಮಯದಲ್ಲಿ

ಗೆಜೆಟ್ ಹೊರಡಿಸಲಾಗಿದೆಯೇ ; ಹೊರಡಿಸಿದ್ದಲ್ಲಿ, ಅವುಗಳ ಪ್ರತಿ ನೀಡುವುದು ;

(ಉ) ಗೆಜೆಟ್ ಹೊರಡಿಸದಿದ್ದಲ್ಲಿ ಕಾರಣವೇನು ; ಇದರಿಂದ ಕರ್ನಾಟಕ ಸರ್ಕಾರದ ಆದೇಶವನ್ನು ಉಲ್ಲಂಘಿಸಿದಂತಾಗಲಿಲ್ಲವೇ ; ಇನ್ನು ಎಷ್ಟು ಸಮಯಾವಕಾಶದಲ್ಲಿ ಗೆಜೆಟ್ ಹೊರಡಿಸಲಾಗುವುದು ? (ನಿಗದಿತ ದಿನಾಂಕವನ್ನು ತಿಳಿಸುವುದು)

## ಕಾಳಸಂತೆಯಲ್ಲಿ ಅನ್ನಭಾಗ್ಯ ಯೋಜನೆಯ ಅಕ್ಕಿ ಮಾರಾಟ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೩೬ (೨೫೮೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನ್ನಭಾಗ್ಯ ಯೋಜನೆಯಲ್ಲಿ ಬಿ.ಪಿ.ಎಲ್ ಬಳಕೆದಾರರಿಗೆ ನೀಡುತ್ತಿರುವ ಅಕ್ಕಿಯು ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಳಸಂತೆ ಮಾರಾಟದಲ್ಲಿ ತೊಡಗಿದ್ದವರ ವಿರುದ್ಧ ತೆಗೆದುಕೊಂಡ ಕಾನೂನು ಕ್ರಮವೇನು; ಇದರ ವಿರುದ್ಧ ಮೊಕದ್ದಮೆ ಹೂಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ರಾಜ್ಯದ ಬಿ.ಪಿ.ಎಲ್. ಬಳಕೆದಾರರಿಗೆ ಎಷ್ಟು ಲೀಟರ್ ಸೀಮೆಎಣ್ಣೆಯನ್ನು ವಿತರಿಸಲಾಗುತ್ತಿದೆ ; ಇದರಲ್ಲಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ಪಾಲು ಎಷ್ಟು ; ಕೇಂದ್ರ ಸರ್ಕಾರ ಯಾವ ಆಧಾರದ ಮೇಲೆ ಸೀಮೆಎಣ್ಣೆಯನ್ನು ನೀಡುತ್ತದೆ ?

# ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿ ನಿಲಯಗಳು.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೩೭ (೨೯೯೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ವ್ಯಾಪ್ತಿಯಲ್ಲಿ ಬರುವ ಒಟ್ಟು ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿ / ವಿದ್ಯಾರ್ಥಿನಿಯರಿಗೆ ಸರ್ಕಾರ ಪ್ರತಿದಿನ ಖರ್ಚು ಮಾಡುತ್ತಿರುವ ಮೊತ್ತವೆಷ್ಟು ; ಅವರುಗಳಿಗೆ ನೀಡುತ್ತಿರುವ ಸೌಲಭ್ಯಗಳಾವುವು ;

(ಇ) ಹಾಸ್ಟೆಲ್‌ಗಳಲ್ಲಿ ತಂಗಿರುವ ವಿದ್ಯಾರ್ಥಿಗಳಿಗೆ ಸರಿಯಾದ ಮೂಲಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪ್ರತಿಯೊಬ್ಬ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ ಊಟ ತಿಂಡಿಗೆಂದು ನೀಡುತ್ತಿರುವ ಮೊತ್ತವೆಷ್ಟು ;

(ಉ) ಸದರಿ ಹಣವನ್ನು ಕೆಲವರು ದುರುಪಯೋಗ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಸರಿಯಾಗಿ ಊಟ ಕೊಡದಿರುವುದು ಸರ್ಕಾರ ಗಮನಿಸಿದೆಯೇ ?

## ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು.

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೩೮ (೨೯೯೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗಂಭೀರ ಮಾರಕ ರೋಗಗಳಿಂದ ಬಳಲುತ್ತಿರುವ ರೋಗಿಗಳಿಗೆ ಉತ್ತಮ ಚಿಕಿತ್ಸೆಯನ್ನು ನೀಡುವ ಸಲುವಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಕಂದಾಯ ವಿಭಾಗಗಳಲ್ಲಿ ತೆರೆಯಲಾಗಿದೆಯೇ ; ಯಾವ ಯಾವ ಕಂದಾಯ ವಿಭಾಗಗಳಲ್ಲಿ ತೆರೆಯಲಾಗಿದೆ

(ಆ) ಇದಕ್ಕೆ ಬಿಡುಗಡೆ ಮಾಡಿದ ಹಣವೆಷ್ಟು ; ಖರ್ಚಾದ ಹಣವೆಷ್ಟು ? (ವರ್ಷವಾರು ವಿವರ ನೀಡುವುದು)

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೩೯ (೩೦೦೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಅಭಿವೃದ್ಧಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಯೋಜನೆಗಳಾವುವು ; (ವಿವರಗಳನ್ನು ನೀಡುವುದು)

(ಆ) ಈ ಯೋಜನೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ನಿಗದಿಪಡಿಸಿ, ಬಿಡುಗಡೆ ಮಾಡಿ ವೆಚ್ಚ ಮಾಡಿರುವ ಅನುದಾನದ ಮೊತ್ತವೆಷ್ಟು ; (ಯೋಜನೆಗಳವಾರು ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಜನಾಂಗಗಳ ಕಾಲೋನಿಗಳಲ್ಲಿ/ ಗ್ರಾಮಗಳಲ್ಲಿ ಈ ಯೋಜನೆಗಳಡಿ ಕೈಗೊಂಡಿರುವ ಕಾಮಗಾರಿಗಳಾವುವು ; (ವಿವರಗಳನ್ನು ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಈ ಜನಾಂಗಗಳ ಯೋಜನೆಗಳ ಅಭಿವೃದ್ಧಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೀಡಿರುವ ಅನುದಾನದ ಮೊತ್ತವೆಷ್ಟು ? (ವಿವರಗಳನ್ನು ನೀಡುವುದು)

## ಹೈದರಾಬಾದ್-ಕರ್ನಾಟಕ ಭಾಗದಲ್ಲಿನ ಪ್ರಾದೇಶಿಕ ಅಸಮಾನತೆ ನಿರ್ಮೂಲನೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೨೬೪೦ (೩೦೧೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ. ನಂಜುಂಡಪ್ಪ ಆಯೋಗದಿಂದ ಹೈದರಾಬಾದ್-ಕರ್ನಾಟಕ ಪ್ರಾಂತ್ಯದ ಜಿಲ್ಲೆಗಳ ತಾಲ್ಲೂಕುಗಳಿಗೆ ಇಲಾಖಾವಾರು ಎಷ್ಟು ಅನುದಾನವನ್ನು ನೀಡಲು ಶಿಫಾರಸ್ಸು ಮಾಡಲಾಗಿದೆ;

(ಆ) ಆ ಪೈಕಿ ಎಷ್ಟು ಅನುದಾನ ನೀಡಲಾಗಿದೆ; ನೀಡಿದ್ದಲ್ಲಿ, ಯಾವ ಯಾವ ಯೋಜನೆ ಮತ್ತು ಕಾಮಗಾರಿಗಳಿಗೆ ಯಾವ ಯಾವ ತಾಲ್ಲೂಕುಗಳಿಗೆ ಎಷ್ಟು ಅನುದಾನ ನೀಡಲಾಗಿದೆ; (ವಿವರ ನೀಡುವುದು)

(ಇ) ಈ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸಮಿತಿಯನ್ನು ರಚಿಸಲಾಗಿದೆಯೇ ; ಹಾಗಿದ್ದಲ್ಲಿ, ಸಮಿತಿ ರಚಿಸದೇ ಇರಲು ಕಾರಣಗಳೇನು?

(ಈ) ಈ ಆಯೋಗದ ಶಿಫಾರಸ್ಸಿನಂತೆ ಪ್ರಾದೇಶಿಕ ಅಸಮಾನತೆ ಹೋಗಲಾಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಬೀದರ್ ಜಿಲ್ಲೆಗೆ ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ಡಾ. ನಂಜುಂಡಪ್ಪ ಆಯೋಗದಿಂದ ಎಷ್ಟು ಫಲಾನುಭವಿಗಳಿಗೆ ವಿವಿಧ ವಾಹನಗಳನ್ನು ನೀಡಲಾಗಿದೆ ? (ನೀಡಿದ್ದಲ್ಲಿ, ಅವರ ಹೆಸರು, ವಿಳಾಸ ಹಾಗೂ ಜಾತಿಯ ವಿವರದೊಂದಿಗೆ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಅನ್ನಭಾಗ್ಯ ಯೋಜನೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೨೬೪೧ (೩೦೦೪) ಮಾನ್ಯ ಆಹಾರ ಮತ್ತ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿನ ಅನ್ನಭಾಗ್ಯ ಯೋಜನೆಯ ತಾಲ್ಲೂಕುವಾರು ಫಲಾನುಭವಿಗಳ ಸಂಖ್ಯೆ ಎಷ್ಟು; ಪ್ರತಿ ತಿಂಗಳು ಎಷ್ಟು ಪ್ರಮಾಣದಲ್ಲಿ ಅಕ್ಕಿಯನ್ನು ಈ ಯೋಜನೆಗೆ ಉಪಯೋಗಿಸಲಾಗುತ್ತಿದೆ ;

(ಆ) ಈ ಯೋಜನೆಗೆ ಬೇಕಾಗಿರುವ ಅಕ್ಕಿಯನ್ನು ಎಲ್ಲಿಂದ ಖರೀದಿಸಲಾಗುತ್ತಿದೆ; (ವಿಳಾಸದ ಮಾಹಿತಿ ನೀಡುವುದು) ಅವುಗಳ

ಖರೀದಿಯನ್ನು ಯಾವ ಸಂಸ್ಥೆಯ ಮೂಲಕ ಖರೀದಿಸಲಾಗುತ್ತಿದೆ ; ಪ್ರತಿ ಕಿಲೋ ಅಕ್ಕಿಗೆ ಸರ್ಕಾರ ಎಷ್ಟು ಹಣ ಭರಿಸಿ ಖರೀದಿಸಲಾಗುತ್ತಿದೆ ;

(ಇ) ಈ ಯೋಜನೆಗಾಗಿ ಸರ್ಕಾರದಿಂದ ಭರಿಸಲಾಗುತ್ತಿರುವ ಹಣವೆಷ್ಟು ; (ಕಳೆದ ಒಂದೂವರೆ ವರ್ಷದ ವಿವರ ನೀಡುವುದು)

(ಈ) ಇದುವರೆಗೂ ಈ ಯೋಜನೆಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲ್ಲಿಯವರೆಗೆ ಎಷ್ಟು ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಯಾವ ಯಾವ ಕ್ರಮ ದಾಖಲಾಗಿದೆ ಅಂತಹ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಹೆಸರುಗಳೊಂದಿಗೆ ಮಾಹಿತಿ ನೀಡುವುದು ? (ತಾಲ್ಲೂಕುವಾರು ಮಾಹಿತಿ ಮತ್ತು ಅಕ್ಕಿಯ ಪ್ರಮಾಣ ಮತ್ತು ಅದರ ಅಂದಾಜು ಮೊತ್ತದ ವಿವರ ಒದಗಿಸುವುದು)

## SCP ಮತ್ತು TSP ಯೋಜನೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೨೬೪೨ (೩೦೦೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ SCP ಮತ್ತು TSP ೨೦೧೪-೧೫ನೇ ಸಾಲಿನ ಅನುದಾನ ಬಿಡುಗಡೆ ಮಾಡಲಾಗಿದೆಯೇ; ಮಾಡಿದ್ದಲ್ಲಿ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ನೀಡಲಾಗಿದೆ ;

(ಆ) ಹಾಗಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಲ್ಲಿ ಯಾವ ಯಾವ ಕಾಮಗಾರಿಗಳಿಗ ಎಷ್ಟೆಷ್ಟು ಅನುದಾನ ನೀಡಲಾಗಿದ: ಕೈಗೂಂಡಿದ್ದಲ್ಲ ಯಾವ ಯಾವ ಗ್ರಾಮಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಇ) ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೆ ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಈ) ಕಾಮಗಾರಿಗಳನ್ನು ಕೈಗೊಂಡಿದ್ದಲ್ಲಿ ಆಯಾ ಕಾಮಗಾರಿಯ ಉದ್ದ ಮತ್ತು ಆಗಲ ಹಾಗೆ ಕಾಮಗಾರಿಗಳಿಗೆ ತಗುಲಿದ ವೆಚ್ಚ ಎಷ್ಟು; ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರು ಸಂಪೂರ್ಣ ವಿವರ ನೀಡುವುದು ?

## ವಾಹನಗಳ ಮತ್ತು ಲೈಸೆನ್ಸ್ ನೋಂದಣಿಯನ್ನು ಸರಳೀಕರಣಗೊಳಿಸುವುದು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೪೩ (೩೦೧೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೨೦೧೪ ಮತ್ತು ೨೦೧೪-೨೦೧೫ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ದ್ವಿಚಕ್ರ ವಾಹನಗಳು ಮತ್ತು ನಾಲ್ಕು ಚಕ್ರ ವಾಹನಗಳು ನೋಂದಣಿಯಾಗಿರುತ್ತವೆ; ಇದರಿಂದ ಸರ್ಕಾರಕ್ಕೆ ತೆರಿಗೆ ರೂಪದಲ್ಲಿ ಬಂದ ಆದಾಯವೆಷ್ಟು ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ದ್ವಿಚಕ್ರ ವಾಹನಗಳು ಮತ್ತು ನಾಲ್ಕು ಚಕ್ರ ವಾಹನಗಳು ನೋಂದಣಿಯಾಗಿರುತ್ತವೆ ;

(ಇ) ರಾಜ್ಯದಲ್ಲಿ ವಾಹನಗಳ ಮತ್ತು ಲೈಸೆನ್ಸ್ ನೋಂದಣಿಯನ್ನು ಸರಳೀಕರಣಗೊಳಿಸಲು ಏನು ಕ್ರಮ ಕೈಗೊಳ್ಳಲಾಗಿದೆ ;

(ಈ) ದೇಶದ ಬೇರೆ ರಾಜ್ಯಗಳಲ್ಲಿ ಅತ್ಯಂತ ಸರಳ ಮತ್ತು ಕಡಿಮೆ ಕಾಲಮಿತಿಯಲ್ಲಿ ವಾಹನಗಳ ಮತ್ತು ಲೈಸೆನ್ಸ್ ನೋಂದಣಿಯನ್ನು ಮಾಡುವ ವಿಧಾನ ಎಲ್ಲಿದೆ; ಆ ಯೋಜನೆಯನ್ನು ನಮ್ಮ ರಾಜ್ಯದಲ್ಲಿ ಜಾರಿಗೊಳಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಉ) ಜನರಿಗೆ ಅನುಕೂಲವಾಗಲು ಆನ್‌ಲೈನ್ ಮುಖಾಂತರ ನೋಂದಣಿಯನ್ನು ಸರಳೀಕರಣಗೊಳಿಸುವ ವಿಚಾರವಾಗಿ ಏನು ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

**ಹುಬ್ಬಳ್ಳಿ–ಬೆಳಗಾವಿ ಮಹಾನಗರಗಳ ಸಂಚಾರಕ್ಕೆ ವೋಲ್ವೋ ಬಸ್**

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೪೪ (೩೦೧೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಮೈಸೂರು ಮಹಾನಗರಗಳ ಮಧ್ಯೆ ಇರುವ ವೋಲ್ವೋ ಬಸ್ಸಿನ ಸೌಕರ್ಯದಂತೆ ಹುಬ್ಬಳ್ಳಿ–ಬೆಳಗಾವಿ ಮಹಾನಗರಗಳ ಮಧ್ಯೆಯೂ ಪ್ರಾರಂಭಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಆ) ಹುಬ್ಬಳ್ಳಿಯು ಉತ್ತರ ಕರ್ನಾಟಕದ ವಾಣಿಜ್ಯ ನಗರವಾಗಿದ್ದು, ಧಾರವಾಡದಲ್ಲಿ ಹೈಕೋರ್ಟ್ ಪೀಠ, ಕೃಷಿ ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ವಿಶ್ವವಿದ್ಯಾಲಯ ಇರುವುದರಿಂದ ಬೆಳಗಾವಿ ಮಹಾನಗರದಿಂದ ಹುಬ್ಬಳ್ಳಿಗೆ ತಡೆ ರಹಿತ ವೋಲ್ವೋ ಬಸ್ಸಿನ ಸೌಕರ್ಯವನ್ನು ಯಾವಾಗ ಪಾರಂಭಿಸಲಾಗುವುದು ?

## ಮಹಾರಾಷ್ಟ್ರ ರಾಜ್ಯದ ಪ್ರಮುಖ ಧಾರ್ಮಿಕ ಕ್ಷೇತ್ರಗಳಿಗೆ ರಾಜ್ಯದಿಂದ ಬಸ್ಸಿನ ಸೌಕರ್ಯ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೪೫ (೩೦೧೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾರಾಷ್ಟ್ರ ರಾಜ್ಯದಲ್ಲಿರುವ ಪ್ರಮುಖ ಧಾರ್ಮಿಕ ಕ್ಷೇತ್ರಗಳಿಗೆ ಹೋಗಲು ರಾಜ್ಯದ ಭಕ್ತಾದಿಗಳಿಗೆ ಬಸ್ಸಿನ ಸೌಕರ್ಯ ಸಾಕಷ್ಟು ಪ್ರಮಾಣದಲ್ಲಿ ಇಲ್ಲದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಹಾರಾಷ್ಟ್ರ ರಾಜ್ಯದ ಪ್ರಮುಖ ಧಾರ್ಮಿಕ ಕ್ಷೇತ್ರಗಳಾದ ಶಿರಡಿ, ಪಂಡರಪುರ ಹಾಗೂ ಗುಡ್ಡಾಪೂರ ಧಾನಮ್ಮಾ ಕ್ಷೇತ್ರಗಳಿಗೆ ಹಾಲಿ ಇರುವ ಬಸ್ಸಿನ ಸೌಕರ್ಯವು ರಾಜ್ಯದ ಯಾವ ಯಾವ ನಗರಗಳಿಂದ ಇವೆ ;

(ಇ) ರಾಜ್ಯದ ಪ್ರಮುಖ ನಗರಗಳಾದ ಬೆಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ ಮತ್ತು ಚಿಕ್ಕೋಡಿ ಪಟ್ಟಣದಿಂದ ಈ ಕ್ಷೇತ್ರಗಳಿಗೆ ಬಸ್ಸಿನ ಸೌಕರ್ಯ ಕಲ್ಪಿಸಿದೆಯೇ ?

## ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಘಟಕಗಳು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೪೬ (೩೦೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಘಟಕಗಳು ಕಾರ್ಯನಿರ್ವಹಿಸದೆ ಇರುವುದರಿಂದ ರೋಗಿಗಳಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳಗಾವಿ ಜಿಲ್ಲೆಯ ಯಾವ ಯಾವ ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಘಟಕಗಳನ್ನು ಸ್ಥಾಪಿಸಲಾಗಿದೆ ;

(ಇ) ಅದರಲ್ಲಿ ಯಾವ ಯಾವ ಡಯಾಲಿಸಿಸ್ ಘಟಕಗಳಲ್ಲಿ ತಾಂತ್ರಿಕ ಸಿಬ್ಬಂದಿಯು ಕಾರ್ಯನಿರ್ವಹಿಸುತ್ತಿದ್ದಾರೆ ;

(ಈ) ತಾಂತ್ರಿಕ ಸಿಬ್ಬಂದಿಯ ಕೊರತೆಯಿಂದ ಡಯಾಲಿಸಿಸ್ ಘಟಕಗಳು ಕಾರ್ಯನಿರ್ವಹಿಸದೇ ಇರುವ ವಿಚಾರವಾಗಿ ಸರ್ಕಾರವು ಏನು ಕ್ರಮ ಕೈಗೊಂಡಿದೆ;

F-7 B/B

(ಉ) ಬೆಳಗಾವಿ ಜಿಲ್ಲೆಯ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಘಟಕಗಳನ್ನು ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ ?

## ರೋಬೋಟಿಕ್ಸ್ ಶಿಕ್ಷಣ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೪೭ (೩೦೧೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ವಿದ್ಯಾರ್ಥಿಗಳಿಗೆ ಮತ್ತು ಇಂಜಿನಿಯರ್ ವಿದ್ಯಾರ್ಥಿಗಳಿಗೆ ರೋಬೋಟಿಕ್ಸ್ ಶಿಕ್ಷಣ ನೀಡುವ ಯೋಜನೆಯನ್ನು ಕೊರಿಯಾ ಸರ್ಕಾರದ ಸಹಯೋಗದಲ್ಲಿ ಆಯೋಜಿಸಲಾಗುವುದೆಂದು ೨೦೧೪-೨೦೧೫ನೇ ಸಾಲಿನ ಆಯವ್ಯಯದಲ್ಲಿ ತಿಳಿಸಲಾಗಿತ್ತೆ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೊರಿಯಾ ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆಯೇ ;

(ಆ) ಇದಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು; ಇದಕ್ಕಾಗಿ ತಗಲುವ ಅಂದಾಜು ವೆಚ್ಚವೆಷ್ಟು ;

(ಇ) ರೋಬೋಟಿಕ್ಸ್ ಶಿಕ್ಷಣವನ್ನು ನೀಡಲು ನಮ್ಮ ರಾಜ್ಯದಲ್ಲಿ ಅಧ್ಯಾಪಕರು ಮತ್ತು ಸಿಬ್ಬಂದಿ ವರ್ಗ ಲಭ್ಯವಿದೆಯೇ ?

## ರಾಜ್ಯದಲ್ಲಿ ಬಿಪಿಎಲ್ ಪಡಿತರ ಚೀಟಿದಾರರು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೪೪ (೩೦೨೦) ಮಾನ್ಯ ಆಹಾರ ಮತ್ತ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಬಿಪಿಎಲ್ ಪಡಿತರ ಚೀಟಿದಾರರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು).

(ಆ) ಸದರಿ ಇಲಾಖೆಯ ಅನ್ನಭಾಗ್ಯ ಯೋಜನೆಯಡಿ ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವ ಪ್ರಕರಣಗಳು ಕೇಳಿಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಹೊಸದಾಗಿ ಬಿಪಿಎಲ್ ಪಡಿತರ ಚೇಟಿ ಪಡೆಯಲು ಸರ್ಕಾರ ನಿಗಧಿ ಮಾಡಿರುವ ಮಾರ್ಗಸೂಚಿಗಳೇನು; ಪ್ರಸ್ತುತ, ಈ ಯೋಜನೆಯನ್ನು ಸ್ಥಗಿತಗೊಳಿಸಿರುವುದಕ್ಕೆ ಕಾರಣವೇನು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳ ಕೊರತೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೪೯ (೩೦೧೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲಾ ಆಸ್ಪತ್ರೆಗೆ ಬರುವ ರೋಗಿಗಳಿಗೆ ವೈದ್ಯರುಗಳು ಸಕಾಲದಲ್ಲಿ ಸಿಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವೈದ್ಯರ ಸೇವಾ ಅವಧಿಯಲ್ಲಿ ರೋಗಿಗಳಿಗೆ ಸ್ಪಂದಿಸಿ ಔಷದೋಪಚಾರ ನೀಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಮಂಡ್ಯ ಜಿಲ್ಲಾಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕೊರತೆಯನ್ನು ನೀಗಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗುತ್ತಿಗೆ ಆಧಾರದಲ್ಲಿರುವ ನರ್ಸ್‌ಗಳ ಸೇವೆ ಖಾಯಂ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೫೦ (೩೦೨೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಗುತ್ತಿಗೆ ಆಧಾರದ ನರ್ಸ್‌ಗಳ ಸಂಖ್ಯೆ ಎಷ್ಟು;

ಹಾಗೂ ಈ ಗುತ್ತಿಗೆ ನರ್ಸ್‌ಗಳಿಗೆ ನೀಡುತ್ತಿರುವ ವೇತನ ಹಾಗೂ ಇನ್ನಿತರೆ ಸೌಲಭ್ಯಗಳೇನು ;

(ಆ) ಸರ್ಕಾರ ಹೊಸದಾಗಿ ನರ್ಸ್‌ಗಳನ್ನು ನೇಮಕ ಮಾಡಿಕೊಂಡಿದೆಯೆ; ಎಷ್ಟು ಜನರನ್ನು ನೇಮಕ ಮಾಡಲಾಗಿದೆ ;

(ಇ) ಹೊಸ ನರ್ಸ್‌ಗಳನ್ನು ನೇಮಕ ಮಾಡಿಕೊಳ್ಳುವ ಬದಲಿಗೆ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ನರ್ಸ್‌ಗಳನ್ನೇ ಖಾಯಂ ಮಾಡದಿರಲು ಕಾರಣವೇನು ;

(ಈ) ಹಾಗಿದ್ದಲ್ಲಿ, ಗುತ್ತಿಗೆ ಆಧಾರದ ನರ್ಸ್‌ಗಳ ಭವಿಷ್ಯ ಕುರಿತು ಸರ್ಕಾರದ ನಿಲುವೇನು ?

## ಬೆಳಗಾವಿ ಜಿಲ್ಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಯಕ್ರಮಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೬೫೧ (೩೦೨೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾಂ ಜಿಲ್ಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವತಿಯಿಂದ ಯಾವ್ಯಾವ ಕಾರ್ಯಕ್ರಮಗಳು ಅನುಷ್ಠಾನಗೊಂಡಿವೆ ; (ತಾಲ್ಲೂಕುವಾರು ವಿವರ ನೀಡುವುದು).

(ಆ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಈ ಜಿಲ್ಲೆಯಲ್ಲಿ ಯಾವ ಯಾವ ಕ್ಷೇತ್ರಕ್ಕೆ ಎಷ್ಟು ಹಣ ಬಿಡುಗಡೆಯಾಗಿದೆ; ಎಷ್ಟು ವೆಚ್ಚವಾಗಿದೆ, ಎಷ್ಟು ಬಾಕಿ ಉಳಿದಿದೆ ;

(ಇ) ಸಾಕಷ್ಟು ಹಣ ಬಳಕೆಯಾಗದೆ ಇರಲು ಕಾರಣವೇನು; ಬಳಕೆ ಮಾಡದೆ ವಿಫಲವಾದವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೫೨ (೩೦೨೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಿಗೆ ಅವಶ್ಯವಿರುವ ಔಷಧಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಹಾಗಿದ್ದಲ್ಲಿ ಅವಶ್ಯಕವಾಗಿ ಕೊರತೆ ಇರುವ ಔಷಧಿಗಳನ್ನು ಸರಬರಾಜು ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಇ) ಗ್ರಾಮೀಣ ಪ್ರದೇಶದ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಔಷಧಿಗಳನ್ನು ನೀಡದೆ ಹೊರಗಡೆ ಕೊಂಡುಕೊಳ್ಳಲು ವೈದ್ಯರು ಚೀಟಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಇದರಿಂದ ಸಾರ್ವಜನಿಕರು ಪ್ರತಿನಿತ್ಯ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಹಾಗಿದ್ದಲ್ಲಿ, ಈ ರೀತಿ ಚೀಟಿ ನೀಡುತ್ತಿರುವ ವೈದ್ಯರುಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹೋಮಿಯೋಪತಿ ಚಿಕಿತ್ಸಾ ಕೇಂದ್ರಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೫೩ (೩೦೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಹೋಮಿಯೋಪತಿ ಚಿಕಿತ್ಸಾ ಕೇಂದ್ರಗಳೆಷ್ಟು; ಯಾವ ಯಾವ ತಾಲ್ಲೂಕಿನಲ್ಲಿವೆ; (ವಿವರ ನೀಡುವುದು).

(ಆ) ಬೆಳಗಾವಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ನೋಂದಾಯಿತರಾಗಿರುವ ಹೋಮಿಯೋಪತಿ ವೈದ್ಯರುಗಳ ಸಂಖ್ಯೆ ಎಷ್ಟು;

(ಇ) ಹೋಮಿಯೋಪತಿ ವೈದ್ಯರುಗಳ ಸೇವೆಯನ್ನು ಸದುಪಯೋಗ ಪಡಿಸಿಕೊಳ್ಳಲು ಹೆಚ್ಚಿನ ಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸಲಾಗುವುದೆ ?

## ನಕಲಿ ಪಡಿತರ ಚೀಟಿ ತಡೆಗಟ್ಟುವ ಬಗ್ಗೆ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೨೬೫೪ (೨೯೨೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಕಲಿ ಪಡಿತರ ಚೀಟಿಗಳು ಅಧಿಕವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ ಈವರೆಗೆ ಎಷ್ಟು ನಕಲಿ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ ;

(ಇ) ನಕಲಿ ಪಡಿತರ ಚೀಟಿಗಳ ನಿಯಂತ್ರಣಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಅರ್ಹರಿಗೆ ಹೊಸ ಪಡಿತರ ಚೀಟಿಗಳನ್ನು ಯಾವಾಗ ಹಂಚಿಕೆ ಮಾಡಲಾಗುವುದು; ಇರುವ ಮಾನದಂಡಗಳೇನು ?

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಕೈಗೊಂಡ ಕಾಮಗಾರಿಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೫೫ (೨೯೪೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಗೆ ೨೦೧೩-೧೪ರಿಂದ ಪ್ರಸಕ್ತ ಸಾಲಿನವರೆಗೆ ಸಮಾಜ ಕಲ್ಯಾಣ ಇಲಾಖೆಗೆ ಮಂಜೂರಾದ ಅನುದಾನ ಮೊತ್ತವೆಷ್ಟು; ಯಾವ ಯಾವ ತಾಲ್ಲೂಕಿಗೆ ಎಷ್ಟು ಹಣ ಮಂಜೂರಾಗಿರುತ್ತದೆ ; (ಮಾಹಿತಿ ನೀಡುವುದು)

(ಆ) ಕೊಪ್ಪಳ ಜಿಲ್ಲೆಯಲ್ಲಿ ಈ ಸಾಲಿನಲ್ಲಿ ಕೈಗೊಂಡ ಕಾಮಗಾರಿಗಳಾವುವು; (ಕಾಮಗಾರಿವಾರು ಮಾಹಿತಿ ನೀಡುವುದು) ಕಾಮಗಾರಿಗಳಿಗೆ ಮಂಜೂರಾದ ಹಣವೆಷ್ಟು; (ಮಾಹಿತಿ ನೀಡುವುದು)

(ಇ) ಕೊಪ್ಪಳ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಈ ಸಾಲಿನಲ್ಲಿ ಎಷ್ಟು ಸಮುದಾಯ ಭವನಗಳನ್ನು ನಿರ್ಮಾಣ ಮಾಡಲಾಗಿದೆ ; ಯಾವ ಯಾವ ತಾಲ್ಲೂಕುಗಳಲ್ಲಿ ಕಾಮಗಾರಿಗಳು ಪೂರ್ಣಗೊಂಡಿವೆ ; ಪೂರ್ಣಗೊಳ್ಳದ ಕಾಮಗಾರಿಗಳ ಸಂಖ್ಯೆ ಎಷ್ಟು ; (ಗ್ರಾಮವಾರು ಮಾಹಿತಿ ನೀಡುವುದು)

(ಈ) ಸದರಿ ಕಾಮಗಾರಿಗಳ ಅನುಷ್ಠಾನವನ್ನು ಯಾವ ಏಜೆನ್ಸಿಗಳಿಗೆ ನೀಡಲಾಗಿದೆ; ಕಾಮಗಾರಿಗಳ ಗುಣಮಟ್ಟ ಪರೀಕ್ಷೆಗೆ ಕೈಗೊಂಡ ಕ್ರಮಗಳೇನು ?

## ಹಿಂದುಳಿದ ವರ್ಗಗಳ ಇಲಾಖೆಯಲ್ಲಿನ ಕುಂದುಕೊರತೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೫೬ (೭೯೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ 'ಬಿ' ದರ್ಜೆಯ ಅಧಿಕಾರಿಗಳ ಹುದ್ದೆ ಸೃಜಿಸಲಾಗಿದೆಯೇ ;

(ಆ) ಸೃಜಿಸಲಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಆಹಾರ ಪದ್ಧತಿ ಸರಬರಾಜು ಪ್ರಕ್ರಿಯೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಇ–ಪ್ರಕ್ಯೂರ್‌ಮೆಂಟ್ ಮಾಡಲು ಸಾಧ್ಯವಿದೆಯೇ ;

(ಈ) ಆಯುಕ್ತಾಲಯ ಕಛೇರಿಯಿಂದ ವಿದ್ಯಾರ್ಥಿ ನಿಲಯಗಳಿಗೆ ಬೇಕಾಗುವ ಸಾಮಗ್ರಿಗಳನ್ನು ಕಳೆದ ಸಾಲಿನಲ್ಲಿ ಖರೀದಿಸಿ ಸರಬರಾಜು ಮಾಡಲಾಗಿದೆಯೇ ?

## ಹೆಚ್.ಆರ್.ಎಂ.ಎಸ್. ಯೋಜನೆಯ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೫೭ (೨೯೪೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಚ್.ಆರ್.ಎಂ.ಎಸ್. ಯೋಜನೆಯಲ್ಲಿ ರಾಜ್ಯದ ಎಷ್ಟು ಇಲಾಖೆಗಳು ಒಳಗೊಂಡಿವೆ ; (ವಿವರ ನೀಡುವುದು)

(ಆ) ಹೆಚ್.ಆರ್.ಎಂ.ಎಸ್. ಯೋಜನೆಯಲ್ಲಿರುವ ನಿಗಮ ಮಂಡಳಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಈ ಯೋಜನೆಯ ಕೇಂದ್ರ ಕಛೇರಿ ಎಲ್ಲಿದೆ; ರಾಜ್ಯದ ಎಲ್ಲಾ ಇಲಾಖೆಗಳ ಸರ್ಕಾರಿ ನೌಕರರ ಮಾಹಿತಿಯನ್ನು ನಿರ್ವಹಿಸುತ್ತಿರುವವರು ಯಾರು ;

(ಈ) ಈ ಯೋಜನೆ ಸಮರ್ಪಕವಾಗಿ ಜಾರಿಯಾಗಿದೆಯೇ ; ಇಲ್ಲದಿದ್ದಲ್ಲಿ, ಇರುವ ಅಡೆತಡೆಗಳೇನು ; ಯಾವ ರೀತಿಯ ತೊಂದರೆಗಳನ್ನು ಎದುರಿಸಲಾಗುತ್ತಿದೆ ;

(ಉ) ಸರ್ಕಾರಿ ನೌಕರರಿಗೆ ಈ ಯೋಜನೆಯಿಂದ ಉಪಯೋಗಕ್ಕಿಂತ ಅನಾನುಕೂಲತೆ ಹೆಚ್ಚಾಗುತ್ತಿರುವುದು ಪ್ರಧಾನ ಕಛೇರಿ ಹಾಗೂ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಯೋಜನೆಯನ್ನು ಇನ್ನಷ್ಟು ಸರಳೀಕರಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಡಿ ಅಡಿಕ್ಷನ್ ಸೆಂಟರ್ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೬೫೮ (೨೯೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ಟಾರ್ ಲೈಫ್ ಡಿ ಅಡಿಕ್ಷನ್ ಸೆಂಟರ್, ಕಗ್ಗಲಿಪುರ, ಕನಕಪುರ ಇಲ್ಲಿ ಮದ್ಯವ್ಯಸನಿಗಳಿಗೆ ನರಕಯಾತನೆಯ ಹಿಂಸೆಯನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮುಖ್ಯವಾಗಿ ಬೇಕಾದಂತಹ ಮೂಲಭೂತ ಸೌಕರ್ಯಗಳನ್ನು ಕಲ್ಪಿಸದ ಇಂತಹ ಎಷ್ಟು ಸೆಂಟರ್‌ಗಳು ರಾಜ್ಯದಲ್ಲಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಡಿ ಅಡಿಕ್ಷನ್ ಸೆಂಟರ್‌ಗಳನ್ನು ತೆರೆಯಲು ಸರ್ಕಾರವು ಯಾವ ರೀತಿಯ ನೀತಿ ನಿಯಮಗಳನ್ನು ಅನುಸರಿಸಬೇಕೆಂಬ ಮಾನದಂಡಗಳನ್ನು ನಿಗದಿಪಡಿಸಿ ಲೈಸನ್ಸ್‌ಗಳನ್ನು ನೀಡುತ್ತಿದೆ ; (ಪ್ರತಿ ಒದಗಿಸುವುದು)

(ಈ) ಸ್ಟಾರ್ ಲೈಫ್ ಡಿ ಅಡಿಕ್ಷನ್ ಸೆಂಟರ್, ಕಗ್ಗಲಿಪುರ, ಕನಕಪುರ ಇಲ್ಲಿ ನಡೆದಿರುವ ಅಮಾನವೀಯ ಘಟನೆಗಳ ಹಿನ್ನಲೆಯಲ್ಲಿ ಇದಕ್ಕೆ ನೀಡಲಾದ ಲೈಸನ್ಸ್ ಅನ್ನು ರದ್ದುಪಡಿಸಲಾಗಿದೆಯೇ ಹಾಗೂ ಸಂಬಂಧಪಟ್ಟವರ ಮೇಲೆ ಯಾವ ರೀತಿಯ ಕಾನೂನು ಕ್ರಮ ಜರೂಗಿಸಲಾಗಿದೆ ? (ವಿವರವಾದ ಮಾಹಿತಿಯನ್ನು ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿ H1N1 ರೋಗ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) :-**

೨೬೫೯ (೨೯೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಎಷ್ಟು H1N1 ಪ್ರಕರಣಗಳು ಬೆಳಕಿಗೆ ಬಂದಿವೆ ; (ವಿವರ ಒದಗಿಸುವುದು)

(ಆ) ಇಂತಹ ಪ್ರಕರಣಗಳಲ್ಲಿ ಸಾವಿಗೀಡಾದವರ ಸಂಖ್ಯೆ ಎಷ್ಟು ;

(ಇ) ಇಂತಹ ಪ್ರಕರಣಗಳಲ್ಲಿ ಚಿಕಿತ್ಸೆ ಫಲಕಾರಿಯಾಗಿ ಉಳಿದುಕೊಂಡವರ ಸಂಖ್ಯೆ ಎಷ್ಟು;

(ಈ) ಜಿಲ್ಲೆಯಲ್ಲಿ H1N1 ರೋಗದ ಔಷಧಿಗಳು ಸರಿಯಾಗಿ ಸಿಗುತ್ತಿವೆಯೇ; ಸಿಗದಿದ್ದಲ್ಲಿ, ಸೂಕ್ತ ಕಾರಣ ತಿಳಿಸುವುದು ;

(ಉ) ಜಿಲ್ಲೆಯಲ್ಲಿ ಈ ರೋಗಕ್ಕೆ ಯಾವ ಯಾವ ಔಷಧಿಗಳನ್ನು ಒದಗಿಸಲಾಗುತ್ತಿದೆ ?

## ಸಮಾಜ ಕಲ್ಯಾಣ ಇಲಾಖೆಯ ಯೋಜನೆಗಳು

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೬೦ (೨೯೯೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ರಾಮನಗರ ಜಿಲ್ಲೆಯ ಗಂಗಾಕಲ್ಯಾಣ ಮತ್ತು ಇತರ ಯೋಜನೆಗಳ ಫಲಾನುಭವಿಗಳನ್ನು ಗುರುತಿಸುವಲ್ಲಿ ಸಾಧಿಸಿರುವ ಪ್ರಗತಿಯೇನು ;

(ಆ) ಮೇಲ್ಕಂಡ ಅವಧಿಯಲ್ಲಿ ಪ್ರತಿ ವರ್ಷ ಖರ್ಚು ಮಾಡಿರುವ ಹಣವೆಷ್ಟು; ಎಷ್ಟು ಜನ ಫಲಾನುಭವಿಗಳಿಗೆ ಅನುಕೂಲವಾಗಿದೆ ; (ವಿವರ ನೀಡುವುದು)

(ಇ) ಮೇಲ್ಕಂಡ ಅವಧಿಯಲ್ಲಿ ಎಷ್ಟು ಫಲಾನುಭವಿಗಳನ್ನು ಗುರುತಿಸುವ ಗುರಿಯನ್ನು ಹೊಂದಲಾಗಿತ್ತು ಮತ್ತು ಈ ಬಗ್ಗೆ ಗುರುತಿಸಲಾದ ಫಲಾನುಭವಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಮೇಲ್ಕಂಡ ಅವಧಿಯಲ್ಲಿ ಗಂಗಾಕಲ್ಯಾಣ ಯೋಜನೆ ಅಡಿಯಲ್ಲಿ ಎಷ್ಟು ಬೋರ್‌ವೆಲ್‌ಗಳನ್ನು ಕೊರೆಯಲಾಗಿದೆ; ಎಷ್ಟು ಬೋರ್‌ವೆಲ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆ ? (ವಿವರ ನೀಡುವುದು)

## ವೈದ್ಯಕೀಯ ಕಾಲೇಜುಗಳಿಗೆ ಸ್ವಂತ ಕಟ್ಟಡ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೬೧ (೨೯೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಮೆಡಿಕಲ್ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಸರ್ಕಾರಿ ಮೆಡಿಕಲ್ ಕಾಲೇಜುಗಳಿಗೆ ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯ ಸರ್ಕಾರ ವೆಚ್ಚ ಮಾಡಿದ ಹಣವೆಷ್ಟು;

(ಇ) ಈ ವೈದ್ಯಕೀಯ ಕಾಲೇಜುಗಳು ಹಣವನ್ನು ಯಾವ ಯಾವ ಬಾಬ್ತಿಗಾಗಿ ವೆಚ್ಚ ಮಾಡಿವೆ;

(ಈ) ರಾಜ್ಯದಲ್ಲಿರುವ ವೈದ್ಯ ಕಾಲೇಜುಗಳ ಪೈಕಿ ಎಷ್ಟು ಕಾಲೇಜುಗಳು ಸ್ವಂತ ಕಟ್ಟಡವನ್ನು ಹೊಂದಿವೆ ಮತ್ತು ಎಷ್ಟು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ?

## ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೂಲಭೂತ ಸೌಲಭ್ಯಗಳು

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೬೨ (೨೯೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯಲ್ಲಿರುವ ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಈ ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಟ್ಟಡ ಹಾಗೂ ಮೂಲಭೂತ ಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಾದರೆ ಕಟ್ಟಡಗಳನ್ನು ನಿರ್ಮಿಸಲು ಹಾಗೂ ಮೂಲಭೂತ ಸೌಲಭ್ಯವನ್ನು ಕಲ್ಪಿಸಿಕೊಡಲು ಸರ್ಕಾರವು ಕೈಗೊಂಡ ಕ್ರಮವೇನು; ಯಾವ ಕಾಲಮಿತಿಯಲ್ಲಿ ಕಟ್ಟಡಗಳನ್ನು ನಿರ್ಮಿಸಲಾಗುವುದು ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂಗಳೂರು-59/ಕಾ.ಸೂ.03527 / 1200 ಪ್ರತಿಗಳು/26-03-15